ವಿಜಯಪುರ | ಸಂಪುಟ 04 | ಸಂಚಿಕೆ 049 | ಪುಟ 04 | ₹ 3.00

https://udayarashminews.com

udayarashmi 90088 88340

# ಉದಯ ರಶ್ಮಿ

Udayarashmi Kannada Daily

ಜನಪರ-ಜೀವಪರ

ಕನ್ನಡ ದಿನಪತ್ರಿಕೆ

ಸಂಪಾದಕ : ಇಂದುಶೇಖರ ಮಣೂರ

Editor: Indushekhar Manur

editor.udayarashmi@gmail.com RNI NO: KARKAN/2023/86203 ಗುರುವಾರ, ಏಪ್ರಿಲ್, 09, 2026

"ಭಾರತವು ವೈವಿಧ್ಯಮಯ ಜಾತಿ ಮತ್ತು ಧರ್ಮಗಳ ದೇಶವಾಗಿದೆ ಮತ್ತು ಡಾ.ಬಿ.ಆರ್. ಅಂಬೇಡ್ಕರ್ ಬರೆದ ಸಂವಿಧಾನವು ಸಮಾಜದ ಎಲ್ಲಾ ವರ್ಗಗಳಿಗೆ ಸಮಾನ ಅವಕಾಶಗಳನ್ನು ಒದಗಿಸುತ್ತದೆ. ಆದರೆ ಕೋಮುವಾದದಲ್ಲಿ ತೊಡಗಿರುವ ಬಿಜೆಪಿ ಜಾತಿ ಮತ್ತು ಮತಗಳ ಆಧಾರದ ಮೇಲೆ ಮತಯಾಚನೆ ಮಾಡುತ್ತಿದೆ."



■ ಸಿದ್ದರಾಮಯ್ಯ
ಮುಖ್ಯಮಂತ್ರಿ

# ಪವರ್ ಗ್ರೀಡ್ ಸಂಸ್ಥೆಯಿಂದ ದೇಶಕ್ಕೆ ಅಪಾರ ಕೊಡುಗೆ

## ಜಿಪಂನಲ್ಲಿ ಸಿಎಸ್ ಆರ್ ಅನುದಾನದಡಿ ಸಲಕರಣೆ ವಿತರಣೆ | ಜಿಲ್ಲಾ ಉಸ್ತುವಾರಿ ಸಚಿವ ಡಾ. ಎಂ.ಬಿ. ಪಾಟೀಲ ಬಣ್ಣನೆ

■ ಉದಯರಶ್ಮಿ ದಿನಪತ್ರಿಕೆ

ವಿಜಯಪುರ: ಪವರ್ ಗ್ರೀಡ್ ಸಂಸ್ಥೆ ನಮ್ಮ ದೇಶದಲ್ಲಿರುವ ಹೆಮ್ಮೆಯ ಸಂಸ್ಥೆ, ಈ ಸಂಸ್ಥೆ ಸ್ಪರ್ಧಾತ್ಮಕವಾಗಿ ದೇಶಕ್ಕೆ ದೊಡ್ಡ ಕೊಡುಗೆ ನೀಡಿದೆ ಎಂದು ಬೃಹತ್ ಹಾಗೂ ಮಧ್ಯಮ ಕೈಗಾರಿಕೆ, ಮೂಲ ಸೌಲಭ್ಯ ಅಭಿವೃದ್ಧಿ ಹಾಗೂ ಜಿಲ್ಲಾ ಉಸ್ತುವಾರಿ ಸಚಿವರಾದ ಡಾ. ಎಂ.ಬಿ. ಪಾಟೀಲ ಹೇಳಿದರು.

ಬುಧವಾರ ನಗರದ ಜಿಲ್ಲಾ ಪಂಚಾಯತ ಸಭಾಂಗಣದಲ್ಲಿ ಪವರ್‌ಗ್ರಿಡ್ ಕಾರ್ಪೋರೇಷನ್ ಆಫ್ ಇಂಡಿಯಾ ಲಿಮಿಟೆಡ್, ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ, ಕ್ರೀಡಾ ಇಲಾಖೆ, ಪ್ರವಾಸೋದ್ಯಮ ಇಲಾಖೆ ವತಿಯಿಂದ ಸಿ.ಎಸ್.ಆರ್ ಅನುದಾನದಡಿ ಆರೋಗ್ಯ, ಶಿಕ್ಷಣ ಮತ್ತು ಕ್ರೀಡಾ ಇಲಾಖೆಗಳಿಗೆ ಸಾಧನ-ಸಲಕರಣೆಗಳ ವಿತರಣೆ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ಅವರು, ಪವರ್ ಗ್ರೀಡ್ ಸಿಎಸ್‌ಆರ್ ಅನುದಾನದಡಿ ಆರೋಗ್ಯ ಇಲಾಖೆ ಸಲಕರಣೆಗಳು, ಶಿಕ್ಷಣ ಇಲಾಖೆಗೆ 2500 ಮೇಜುಗಳ ವಿತರಣೆ ಸೇರಿದಂತೆ ಡಾ. ಬಿ.ಆರ್. ಅಂಬೇಡ್ಕರ್ ಕ್ರೀಡಾಂಗಣಕ್ಕೆ ವಿದ್ಯುತ್ ವ್ಯವಸ್ಥೆ ಅಳವಡಿಕೆ, ಪ್ರವಾಸೋದ್ಯಮ ಇಲಾಖೆ ಎಸ್ ಸಿಪಿಟಿ, ಎಸ್‌ಪಿ ಯೋಜನೆಯಡಿ ಆರು ಫಲಾನುಭವಿಗಳಿಗೆ ಮೊಬೈಲ್ ಕ್ಯಾಂಟೀನ್ ವಿತರಿಸಿ ಅವರು ಮಾತನಾಡಿದರು.

ಪವರ್ ಗ್ರೀಡ್ ಸಂಸ್ಥೆ ನೀಡುವ ಸಿಎಸ್ ಆರ್ ಅನುದಾನ ಅರ್ಹ ಫಲಾನುಭವಿಗಳಿಗೆ ತಲುಪಬೇಕು. ಈ ಕುರಿತು ಜಿಲ್ಲಾ ಪಂಚಾಯತಿ ಸಿಇಒ ಅವರಿಗೆ ಸೂಚಿಸಿದ್ದು, ಅನುದಾನ ಸರಿಯಾಗಿ ಸದ್ಬಳಕೆಗೆ ಹೇಳಿದ್ದಾಗಿ ತಿಳಿಸಿದರು.

ಇದೇ ವೇಳೆ ವಿಜಯಪುರ ಜಿಲ್ಲೆಗೆ ಅನುದಾನ ನೀಡಿದ ಪವರ್ ಗ್ರೀಡ್ ಸಂಸ್ಥೆಯ ಅಧಿಕಾರಿಗಳನ್ನು ಅಭಿನಂದಿಸಿದರು.

" ಈ ಸಂಸ್ಥೆಯು ಕಾರ್ಯ ನಿರ್ವಹಿಸುತ್ತಿರುವ ಸ್ಥಳಗಳಲ್ಲಿ ಅಲ್ಲಿಯ ಮಕ್ಕಳಿಗಾಗಿ ಶಿಕ್ಷಣ ಆರೋಗ್ಯ ಹಾಗೂ ಇತರೆ ಅಭಿವೃದ್ಧಿಗಾಗಿ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗುತ್ತಿದೆ. ಅದರೊಂದಿಗೆ ಸಾಮಾಜಿಕ ಕಾರ್ಯಗಳನ್ನು ಏರ್ಪಡಿಸಿ ಜಿಲ್ಲೆಯ ಅಭಿವೃದ್ಧಿಗಾಗಿ ಸದಾ ಈ ಸಂಸ್ಥೆಯು ಎಂದೆಂದಿಗೂ ಕೈಜೋಡಿಸಲಿದೆ."

■ ಮುಕುಂದ ಶರದ್
ಪವರ್‌ಗ್ರೀಡ್‌ನ ಕಾರ್ಯನಿರ್ವಾಹಕ ನಿರ್ದೇಶಕರು







"ಜಿಲ್ಲೆಯಲ್ಲಿ ಜಿಲ್ಲಾ ಉಸ್ತುವಾರಿ ಸಚಿವರ ಮಾರ್ಗದರ್ಶನದಲ್ಲಿ ಜಿಲ್ಲೆಯ ಎಲ್ಲ ಮಕ್ಕಳಿಗೂ ಗುಣಮಟ್ಟದ ಶಿಕ್ಷಣ ಹಾಗೂ ಉತ್ತಮ ಆರೋಗ್ಯ ದೊರಕುವ ನಿಟ್ಟಿನಲ್ಲಿ ತುಂಬಾ ಕೆಲಸಗಳಾಗುತ್ತಿವೆ. ಜಿಲ್ಲೆಯಲ್ಲಿ ಕಾರ್ಯನಿರ್ವಹಿಸುತ್ತಿರುವ ಪವರ್ ಗ್ರಿಡ್ ಸಂಸ್ಥೆಯಿಂಮದ ಸಿ.ಎಸ್.ಆರ್ ಅನುದಾನದಡಿ ತಿಕೋಟಾ ಹಾಗು ಬಬಲೇಶ್ವರ ಭಾಗದ ಸಾರ್ವಜನಿಕರಿಗೆ ಉತ್ತಮ ಆರೋಗ್ಯ ಕಲ್ಪಿಸುವ ನಿಟ್ಟಿನಲ್ಲಿ ವೈದ್ಯಕೀಯ ಸಲಕಣೆ, ನಗರದ ಡಾ. ಅಂಬೇಡ್ಕರ್ ಕ್ರೀಡಾಂಗಣದಲ್ಲಿ ಹಗಲು ಮತ್ತು ರಾತ್ರಿ ವೇಳೆಯಲ್ಲಿ ಕ್ರೀಡಾಪಟುಗಳಿಗೆ ತರಬೇತಿ ಪಡೆಯಲು ಅನುಕೂಲವಾಗುವ ನಿಟ್ಟಿನಲ್ಲಿ ಸೋಲಾರ್ ರೂಫ್ ಟಾಪ್ ಪೆನೆಲ್‌ಗಳ ಅಳವಡಿಕೆ ಮುಂದಿನ ದಿನಗಳಲ್ಲಿ ಇನ್ನೂ ಹೆಚ್ಚಿನ ಅನುದಾನ ನೀಡಿ ಜಿಲ್ಲೆಯ ಸರ್ವೋತ್ತಮ ಬೆಳವಣಿಗೆಗೆ ಸಹಕಾರ ನೀಡುವಂತೆ ಕೋರುವೆ."


■ ಡಾ. ಆನಂದ.ಕೆ
ಜಿಲ್ಲಾಧಿಕಾರಿ, ವಿಜಯಪುರ

ಜಿಲ್ಲೆಯಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಪವರ್ ಗ್ರೀಡ್ ಸಂಸ್ಥೆಯು ಈ ಜಿಲ್ಲೆಗೆ ಸಿಎಸ್ ಆರ್ ಅನುದಾನ ನೀಡಿದ್ದು ದೊಡ್ಡ ಕೊಡುಗೆಯಾಗಿದೆ. ಜಿಲ್ಲೆಯ ಅಭಿವೃದ್ಧಿಗಾಗಿ ನಮ್ಮೊಂದಿಗೆ ಸದಾ ಕೈಜೋಡಿಸುತ್ತಿದೆ. ಇತ್ತೀಚೆಗಷ್ಟೇ ಜಿಂದಾಲ್ ಸಂಸ್ಥೆಯೊಂದಿಗೆ ಸಮಾಲೋಚಿಸಿದ್ದು, ಜಿಲ್ಲೆಯಲ್ಲಿ 100 ವರ್ಷ ಪೂರೈಸಿದ ಸುಮಾರು 258 ಶತಮಾನದ ಶಾಲೆಗಳ ಅಭಿವೃದ್ದಿಗೆ ಕೈಜೋಡಿಸಲು ಕೋರಿದೆ. ಅನುದಾನ ದೊರಕಿದ ಆ ಅನುದಾನದಿಂದ ಸ್ಮಾರ್ಟ್ ಕ್ಲಾಸ್, ಶಾಲಾ ಕೊಠಡಿ, ದುರಸ್ತಿ ಸೇರಿದಂತೆ ಜಿಲ್ಲೆಯ ಎಲ್ಲ ಶಾಲೆಗಳನ್ನು ಉನ್ನತೀಕರಿಸಲಾಗುವುದು ಎಂದು ಅವರು ಹೇಳಿದರು.

ಈ ಕುರಿತು ಜಿಲ್ಲಾಧಿಕಾರಿ ಹಾಗೂ ಸಿಇಒ ಅವರೊಂದಿಗೆ ಚರ್ಚಿಸಿ ಅನುದಾನ ಬಿಡುಗಡೆಗೆ ಪ್ರಾಮಾಣಿಕ ಪ್ರಯತ್ನ ಮಾಡುವುದಾಗಿ ಭರವಸೆ ನೀಡಿದರು.

ಸರ್ಕಾರ ಈದಿಸೆಯಲ್ಲಿ ಅನೇಕ ಕಾರ್ಯಕ್ರಮಗಳನ್ನು ಅನುಷ್ಠಾನಗೊಳಿಸಲಾಗುತ್ತಿದೆ. ಆದಾಗ್ಯೂ ಪವರ್ ಗ್ರೀಡ್‌ನಂತ ಸಂಘ-ಸಂಸ್ಥೆಗಳ ಹಾಗೂ ದಾನಿಗಳ ಕೊಡುಗೆ ನಮ್ಮಲ್ಲಿ ದೊಡ್ಡದಿದೆ. ಸಿಎಸ್ ಆರ್ ಫಂಡ್ ದೊಡ್ಡದು. ಹೀಗೆ ಸರ್ಕಾರ ಹಾಗೂ ಸಾರ್ವಜನಿಕರು ಒಗ್ಗೂಡಿದಾಗ ಒಳ್ಳೆಯ ಕೆಲಸ ಮಾಡಲು ಸಾಧ್ಯವಾಗುತ್ತದೆ. ಈ ನಿಟ್ಟಿನಲ್ಲಿ ಸಂಘ-ಸಂಸ್ಥೆಗಳ ಸಹಾಯ ಸಹಕಾರ ಅಗತ್ಯ ಎಂದು ಹೇಳಿದರು.

### ಪವರ್ ಗ್ರೀಡ್ ಸಂಸ್ಥೆಯ ಸಿಎಸ್ ಆರ್ ಅನುದಾನ





ಪವರ್ ಗ್ರೀಡ್ ಸಂಸ್ಥೆಯು ತನ್ನ ಸಿಎಸ್ ಆರ್ ಅನುದಾನಡಿ ಪ್ರಾಥಮಿಕ ಮತ್ತು ಸಮುದಾಯ ಆರೋಗ್ಯ ಕೇಂದ್ರಕ್ಕೆ ಮೆಡಿಕಲ್ ಸಲಕರಣೆ 19.4 ಲಕ್ಷ ರೂ., ಶಿಕ್ಷಣ ಇಲಾಖೆಯ 145 ಪ್ರಾಥಮಿಕ ಮತ್ತು ಪ್ರೌಢಶಾಲೆಗಳಿಗೆ 2500 ಬೆಂಚ್ ವಿತರಣೆ, 1.82 ಕೋಟಿ ರೂ. ಅನುದಾನದಡಿ, ಜಿಲ್ಲಾ ಕ್ರೀಡಾಂಗಣಕ್ಕೆ ಸೋಲಾರ್ ರೋಪ್ ಅಳವಡಿಸಲು 19.44 ಲಕ್ಷ ರೂ. ಅನುದಾನ ನೀಡಿದ್ದಾರೆ.

ಜಿಲ್ಲಾ ಪಂಚಾಯಿತಿಯಡಿ ವಿಶೇಷಚೇತನರಿಗೆ 3.70 ಲಕ್ಷ ರೂ.ಗಳ ಸಾಧನ-ಸಲಕರಣೆ ಕೊಡುಗೆ ನೀಡಿದ್ದಾರೆ.

ಸ್ಮಾರ್ಟ್ ಕ್ಲಾಸ್ ನಿರ್ಮಾಣಕ್ಕೆ 40 ಲಕ್ಷ ರೂ. ಪ್ರವಾಸೋದ್ಯಮ ಇಲಾಖೆಯಿಂದ ಅನುದಾನ ನೀಡಿದ್ದನ್ನು ಸಚಿವ ಎಂ.ಬಿ.ಪಾಟೀಲ ಸ್ಮರಿಸಿದರು.



"ಜಿಲ್ಲೆಯಲ್ಲಿರುವ ವಿಕಲಚೇತನರಿಗೆ ವಿಕಲಚೇತ ಸಾಧನ ಸಲಕರಣೆಗಳನ್ನು 2025-26ನೇ ಸಾಲಿನ ಜಿಲ್ಲಾ ಪಂಚಾಯತಿಯ ಅನಿರ್ಭಂದಿತ ಅನುದಾನದಡಿ ರೂ.32.87 ಲಕ್ಷ ಮತ್ತು ವಿಕಲಚೇತನರ ಇಲಾಖೆಯ ಅನುದಾನದಡಿ ರೂ.3.70 ಲಕ್ಷಗಳು ಒಟ್ಟು ಅನುದಾನ ರೂ.36.57 ಲಕ್ಷಗಳ ಮೌಲ್ಯದ ಸಾಧನ ಸಲಕರಣೆಗಳನ್ನು ವಿತರಣೆ ಮಾಡುವುದು ಮತ್ತು ಶಿಕ್ಷಣ ಇಲಾಖೆಯಡಿ ಜಿಲ್ಲೆಯಲ್ಲಿರು ಎಲ್ಲಾ ಗಡಿಭಾಗದ 20 ಸರ್ಕಾರಿ ಪ್ರೌಢಶಾಲೆಗಳಿಗೆ ಸ್ಮಾರ್ಟ್ ಕ್ಲಾಸ್ ಪರಿಕರಗಳ ವಿತರಣೆಯನ್ನು 2025-26ನೇ ಸಾಲಿನ ಜಿಲ್ಲಾ ಶೀರ್ಷಿಕೆ:2202 ರಡಿ ರೂ.40.00 ಲಕ್ಷ ಪಂಚಾಯತಿಯ ಅನುದಾನದಲ್ಲಿ ನೀಡುತ್ತಿದೆ ಹಾಗೂ ಪ್ರವಾಸೋದ್ಯಮ ಇಲಾಖೆಯಡಿ 2024-25ನೇ ಸಾಲಿನ ಎಸ್‌ಸಿಪಿ/ಟಿಎಸ್‌ಪಿ

ಯೋಜನೆಯಡಿಯಲ್ಲಿ ಒಟ್ಟು ರೂ.30.00 ಲಕ್ಷಗಳ ಸಹಾಯದನದೊಂದಿಗೆ 6-ಮೊಬೈಲ್ ಕ್ಯಾಂಟೀನ್ ವಾಹನ ವಿತರಣೆಯನ್ನು ಮಾಡಲಾಗುತ್ತಿದೆ."

■ ರಿಷಿ ಆನಂದ
ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ವಿಜಯಪುರ

ಕಾರ್ಯಕ್ರಮದಲ್ಲಿ ಜಿಲ್ಲಾ ಪಂಚಾಯ ಉಪ ಕಾರ್ಯದರ್ಶಿ ಪ್ರಕಾಶ ವಡ್ಡರ, ಮುಖ್ಯ ಯೋಜನಾಧಿಕಾರಿ ಸಿ.ಬಿ ಕುಂಬಾರ, ಮುಖ್ಯ ಲೆಕ್ಕಾಧಿಕಾರಿ ರಾಮಣ್ಣ ಅಥಣಿ, ಪವರ ಗ್ರಿಡ್‌ನ ಸಿ.ಜಿ.ಎಮ್ ಪ್ರೋಜೆಕ್ಟ ಮ್ಯಾನೇಜರ ಶಕುಂತಲಾ ಸಾಹೂ, ಜಿ.ಎಮ್ ಎಚ್.ಆರ್ ತನ್ವೀರ. ಎಮ್, ಕನ್ಸಲಂಟ ಭೀಮಾಶಂಕರ ತುಗದೆ, ಜಿಲ್ಲಾ ಮಟ್ಟದ ಅಧಿಕಾರಿಗಳು ಫಲಾನುಭವಿಗಳು ಹಾಗೂ ಇತರರು ಉಪಸ್ಥಿತರಿದ್ದರು.

# ಇಟ್ಟಂಗಿ ಭಟಿಗಳಿಂದ ಆರೋಗ್ಯ, ಕೃಷಿ ಹಾಗೂ ಪರಿಸರದ ಮೇಲೆ ಪರಿಣಾಮ





■ ಉದಯರಶ್ಮಿ ದಿನಪತ್ರಿಕೆ

## ತಕ್ಷಣ ಕ್ರಮ ಕೈಗೊಳ್ಳುವಂತೆ ಉಪ ವಿಭಾಗಾಧಿಕಾರಿ ಮೂಲಕ ಸಚಿವರಿಗೆ ಶಿವಾನಂದ ಬೋದಲಿ ಆಗ್ರಹ

ಜಮಖಂಡಿ: ತಾಲೂಕಿನ ಚಿಕ್ಕಪಡಸಲಗಿ ಗ್ರಾಮದ ಸಮೀಪ ವಿಜಯಪುರ ಜಮಖಂಡಿ ಮುಖ್ಯ ಹೆದ್ದಾರಿಗೆ ಹೊಂದಿಕೊಂಡಿರುವ ಎಡ ಹಾಗೂ ಬಲ ಭಾಗಗಳಲ್ಲಿ ಕಾರ್ಯ ನಿರ್ವಹಿಸುತ್ತಿರುವ ಇಟ್ಟಂಗಿ ಭಟಿಗಳಿಂದ ಸಾರ್ವಜನಿಕರ ಆರೋಗ್ಯ, ಕೃಷಿ ಹಾಗೂ ಪರಿಸರದ ಮೇಲೆ ಗಂಭೀರ ಪರಿಣಾಮ ಬೀರುತ್ತಿದೆ ಎಂದು ಶಿವಾನಂದ ಬೋದಲಿ ಆರೋಪಿಸಿ ತಕ್ಷಣ ಕ್ರಮ ಕೈಗೊಳ್ಳುವಂತೆ ಆಗ್ರಹಿಸಿದ್ದಾರೆ.

ನಗರದ ತಾಲೂಕು ಆಡಳಿತ ಭವನದಲ್ಲಿ ಉಪವಿಭಾಗಾಧಿಕಾರಿ ಶ್ವೇತಾ ಬಿಡಕರ ಅವರ ಮೂಲಕ ಕಂದಾಯ ಸಚಿವರಿಗೆ ಮನವಿ ಸಲ್ಲಿಸಿ ಮಾತನಾಡಿದ ಅವರು, ಇಟ್ಟಂಗಿ ಭಟಿಗಳಿಂದ ಹೊರಬರುವ ದೂಳು, ಹೊಗೆ ಹಾಗೂ ದುರ್ವಾಸನೆಯಿಂದ ವಯೋವೃದ್ಧರು ಮತ್ತು ಚಿಕ್ಕಮಕ್ಕಳು ನಿರಂತರವಾಗಿ ಅನಾರೋಗ್ಯಕ್ಕೆ ಒಳಗಾಗುತ್ತಿದ್ದಾರೆ. ಜೊತೆಗೆ ಭಾರಿ ಪ್ರಮಾಣದ ವಾಹನ ಸಂಚಾರದಿಂದ ಶಾಲಾ ಮಕ್ಕಳಿಗೆ ರಸ್ತೆ ದಾಟಲು ತೊಂದರೆ ಉಂಟಾಗುತ್ತಿದೆ ಎಂದು ತಿಳಿಸಿದರು.

ಇನ್ನು ಸುತ್ತಮುತ್ತಲಿನ ಕೃಷಿ ಜಮೀನುಗಳ ಮೇಲೆ ದೂಳು ಜಮೆಯಾಗುವುದರಿಂದ ಬೆಳೆಗಳು ಹಾನಿಗೊಳಗಾಗಿ ಇಳುವರಿ ಕಡಿಮೆಯಾಗುತ್ತಿದೆ. ಭಟಿಗಳಲ್ಲಿ ಕೆಲಸ ಮಾಡುವ ಕಾರ್ಮಿಕರಿಗೆ ಮೂಲಭೂತ ಸೌಲಭ್ಯಗಳ ಕೊರತೆ ಇದ್ದು, ಪರಿಸರ ಅಸ್ವಚ್ಛತೆಯಿಂದ ಆರೋಗ್ಯ ಸಮಸ್ಯೆಗಳು ಹೆಚ್ಚುತ್ತಿರುವುದಾಗಿ ದೂರಿದರು.

ಈ ವೇಳೆ ಕಿರಣ ಗುಗ್ಗರಿ ಮಾತನಾಡಿ, ಕೃಷ್ಣಾ ಮೇಲ್ದಂಡೆ ಯೋಜನೆ ವ್ಯಾಪ್ತಿಯ ಜಮೀನುಗಳಿಂದ ಅಕ್ರಮವಾಗಿ ಮಣ್ಣು ಅಗೆದು ಇಟ್ಟಂಗಿ ಭಟಿಗಳಿಗೆ ಬಳಸಲಾಗುತ್ತಿದೆ ಎಂದು ಗಂಭೀರ ಆರೋಪವನ್ನು ಮುಂದಿಟ್ಟರು. ಜೊತೆಗೆ ಭಟಿಗಳ ಮಾಲೀಕರು ದಿನರಾತ್ರಿ ಭಾರಿ ವಾಹನಗಳು ಸಂಚರಿಸುವುದರಿಂದ ಸಾರ್ವಜನಿಕರ ನಿದ್ರೆಗೆ ಭಂಗವಾಗುತ್ತಿದೆ ಎಂದರು.

ಇತ್ತೀಚೆಗೆ ಈ ವಿಷಯವಾಗಿ ಪ್ರಶ್ನಿಸಿದಾಗ, "ಸಂಬಂಧಪಟ್ಟವರಿಗೆ ಹಣ ನೀಡಿದ್ದೇವೆ" ಎಂದು ಭಟಿಗಳ ಮಾಲೀಕರು ಉತ್ತರಿಸಿರುವುದಾಗಿ ಗ್ರಾಮಸ್ಥರು ಆರೋಪಿಸಿದ್ದು, ಈ ಕುರಿತು ಸಮಗ್ರ ತನಿಖೆ ನಡೆಸಿ ತಪ್ಪಿತಸ್ಥರ ವಿರುದ್ಧ ಕಠಿಣ ಕ್ರಮ ಕೈಗೊಳ್ಳಬೇಕೆಂದು ಒತ್ತಾಯಿಸಿದ್ದಾರೆ.

ಮುತ್ತಪ್ಪ ಮರನೂರ್, ಮಹಾದೇವ ಗುಗ್ಗರಿ, ಶಿವಾನಂದ ಕೊಣ್ಣೂರ, ಮುತಾಲಿಕ್ ಬೋದಲಿ, ಶಿವಾನಂದ ಯಣಗಾಯಿ, ವಿದ್ಯಾಲಿಂಗ ಹೊಸಮನಿ, ಮಹದೇವ ಯಣಗಾಯಿ, ಸುದೀಪ್ ಹೊಸಮನಿ, ಪ್ರಜ್ವಲ್ ಬೊದಲಿ, ಸಂತೋಷ್ ಹಾದಿಮನಿ ಇನ್ನೂ ಅನೇಕರು ಇದ್ದರು.

# ಬನ್ನಿ ಬಸವನ ನಾಡಿಗೆ, ಸೂಫಿ ಸಂತರ ಬೀಡಿಗೆ

## ನಾಡಿನ ಕಾರ್ಯನಿರತ ಪತ್ರಕರ್ತರ ಭರವಸೆಯ ಬೆಳಕು KUWJ | ಕಾರ್ಯನಿರತ ಪತ್ರಕರ್ತರ ಸಂಘದ ರಾಜ್ಯಾಧ್ಯಕ್ಷ ಶಿವಾನಂದ ತಗಡೂರ ಕರೆ

■ ಉದಯರಶ್ಮಿ ದಿನಪತ್ರಿಕೆ





ಶತಮಾನೋತ್ಸವದ ಕಡೆಗೆ ಚಲಿಸುತ್ತಿರುವ ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ನಲವತ್ತನೆ ರಾಜ್ಯಸಮ್ಮೇಳನ ಈ ಬಾರಿ ಮಹಾಮಾನವತಾವಾದಿ, ಕನ್ನಡ ನಾಡಿನ ಸಾಂಸ್ಕೃತಿಕ ನಾಯಕ ಬಸವಣ್ಣನ ಶರಣಭೂಮಿ ಬೀದರ್ ನಲ್ಲಿ ಏಪ್ರಿಲ್ 11 &12 ರಂದು ನಡೆಯುತ್ತಿದೆ.

ಮೈಸೂರು ಸಂಸ್ಥಾನದ ನಾಲ್ವಡಿ ಕೃಷ್ಣ ರಾಜ ಒಡೆಯರ್ ಅವರ ಮೊದಲ ದೇಣಿಗೆಯಿಂದ ಡಿ.ವಿ.ಗುಂಡಪ್ಪ (ಡಿವಿಜಿ) ಅವರಿಂದ ಸ್ಥಾಪಿತಗೊಂಡ ಮೈಸೂರು ಪತ್ರಕರ್ತರ ಸಂಘವು 1956ರಲ್ಲಿ ಏಕೀಕರಣದ ಬಳಿಕ ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘ ಎಂದಾಗಿ ಕಾರ್ಯನಿರತ ಪತ್ರಕರ್ತರ ಹಿತರಕ್ಷಣೆ ಮತ್ತು ಅಭ್ಯುದಯಕ್ಕಾಗಿ ಕಾರ್ಯನಿರ್ವಹಿಸುತ್ತಾ ಬಂದಿದೆ.

ಸಂಘ ನಡೆದು ಬಂದ ಹಾದಿ ತನ್ನದೇ ಆದ ಇತಿಹಾಸವನ್ನು ಹೊಂದಿದೆ. ಆದರೆ ಕಳೆದ 10 ವರ್ಷಗಳಲ್ಲಿ ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘ ತನ್ನ ಮೂಲ ಉದ್ದೇಶವನ್ನು ಈಡೇರಿಸಿಕೊಳ್ಳುವ ಹೆಜ್ಜೆಗಳಿಗೆ ಶಕ್ತಿ ಸಂಚಯವನ್ನು ಮಾಡಿಕೊಂಡಿದೆ.

ಸಂಘವು ರಚನಾತ್ಮಕ ಮತ್ತು ಕ್ರೀಯಾತ್ಮಕವಾಗಿ ತನ್ನ ಸಂಘಟನಾ ಚಟುವಟಿಕೆಗಳನ್ನು ನಡೆಸುವ ಮೂಲಕ ಪತ್ರಕರ್ತರ ವೃತ್ತಿಪರ ಸಮಸ್ಯೆಗಳು, ಮತ್ತು ಅವರ ಕುಟುಂಬದ ಸಂಕಷ್ಟಗಳಿಗೆ ಆಪತ್ಕಾಲದ ಆಸರೆ ಆಗಿದೆ.

ಮತ್ತು ಕಾರ್ಯನಿರತ ಪತ್ರಕರ್ತರಿಗೆ ಒಂದು ಭರವಸೆಯಂತೆ ಬೆಳೆಯತೊಡಗಿದೆ.

ಪತ್ರಕರ್ತರ ರಾಜ್ಯಮಟ್ಟದ ಸಮ್ಮೇಳನಗಳನ್ನು ನಡೆಸುವ ಮೂಲಕ ಪತ್ರಕರ್ತರ ಸಮಸ್ಯೆಗಳನ್ನು, ವೃತ್ತಿಪರ ಸವಾಲುಗಳನ್ನು ಸರ್ಕಾರದ ಗಮನಕ್ಕೆ ತರುವ ಮೂಲಕ ಪರಿಹಾರ ಕಂಡುಕೊಳ್ಳುವುದಲ್ಲದೆ. ವೃತ್ತಿಕೌಶಲ್ಯದ ಉನ್ನತೀಕರಣಕ್ಕಾಗಿ ಅನೇಕ ಕಾರ್ಯಕ್ರಮ, ಕಾರ್ಯಾಗಾರಗಳನ್ನು ನಡೆಸಿಕೊಂಡು ಬರುತ್ತಿರುವುದಕ್ಕೆ ವರ್ಷ ಪೂರ್ತಿ ಕೆಯುಡಬ್ಲ್ಯೂಜೆ ಅಂಗಳದಲ್ಲಿ ನಡೆಯುವ ಕಾರ್ಯಕ್ರಮಗಳೇ ಸಾಕ್ಷಿ.

ಕೋವಿಡ್ ಕಾಲದಲ್ಲಿ ಪತ್ರಕರ್ತರಿಗೆ ಮತ್ತು ಅವರ ಕುಟುಂಬಕ್ಕೆ ಕೆಯುಡಬ್ಲ್ಯೂಜೆ ದೊಡ್ಡ ಆಸರೆಯಾಗಿ ನಿಂತು ಸಂಘಟನಾತ್ಮಕ ಹೊಣೆಗಾರಿಕೆಯನ್ನು ನಿಭಾಯಿಸಿದ ತೃಪ್ತಿ ನನ್ನದಾಗಿದೆ.

ಬಸ್ ಪಾಸ್, ಪಿಂಚಣಿ, ಪತ್ರಿಕಾ ಭವನಗಳು, ಪತ್ರಕರ್ತರಿಗೆ ನಿವೇಶನ, ಆರೋಗ್ಯವಿಮೆ.. ಇಂತಹ ಮೂಲಭೂತ ಸೌಲಭ್ಯಗಳಿಗಾಗಿ ಸರ್ಕಾರದ ಗಮನಸೆಳೆದು ಸಾಧಿಸಿಕೊಳ್ಳುವಲ್ಲಿ ಸಂಘದ ಬದ್ಧತೆ ಪ್ರಶ್ನಾತೀತ.

ಬದ್ಧತೆ ಮತ್ತು ಹೊಣೆಗಾರಿಕೆಯ ಎಚ್ಚರ ವಿದ್ದಾಗ ಮಾತ್ರ ಎಲ್ಲವೂ ಸಾಧ್ಯ ಎಂಬುದಕ್ಕೆ ಕೆಯುಡಬ್ಲ್ಯೂಜೆ ದಿನದಿಂದ ದಿನಕ್ಕೆ ತನ್ನ ಸಂಘಟನಾ ಶಕ್ತಿಯನ್ನು ವಿಸ್ತರಿಸಿಕೊಳ್ಳುತ್ತಿರುವುದೇ ನಿದರ್ಶನ. ಪ್ರಜಾಪ್ರಭುತ್ವ ವ್ಯವಸ್ಥೆಯಲ್ಲಿ ಕಾಲಕಾಲಕ್ಕೆ ಚುನಾವಣೆ ಪ್ರಕ್ರಿಯೆಯಲ್ಲಿ ತಾಲೂಕು, ಜಿಲ್ಲಾ ಮತ್ತು ರಾಜ್ಯ ಘಟಕಗಳು ಆಯ್ಕೆಯಾಗಿ ಕಾರ್ಯನಿರ್ವಹಣೆ ಮಾಡುತ್ತಿರುವುದೇ ಇದಕ್ಕೆ ಸಾಕ್ಷಿ ಮತ್ತು ಇದು ಸಂಘದ ಆಂತರಿಕ ಶಕ್ತಿ.

ದಶಕಗಳ ಹಿಂದೆ ಪ್ರತಿವರ್ಷ ಒಂದು ದಿನಕ್ಕೆ ಸೀಮಿತವಾಗಿ ನಡೆಯುತ್ತಿದ್ದ ಪತ್ರಕರ್ತರ ರಾಜ್ಯಸಮ್ಮೇಳನಗಳು ಕಳೆದ 10 ವರ್ಷಗಳಿಂದ ಎರಡು ದಿನಗಳ ಕಾಲ ಅದ್ಧೂರಿಯಾಗಿ ಮತ್ತು ಅರ್ಥಪೂರ್ಣವಾಗಿ ನಡೆಯುತ್ತಾ ಬಂದಿವೆ. ರಾಜ್ಯದ ವಿವಿಧ ಜಿಲ್ಲೆಗಳಲ್ಲಿ ನಡೆಯುವ ಸಮ್ಮೇಳನಗಳು ಆಯಾ ಜಿಲ್ಲೆಯ ಪ್ರಗತಿ, ಪರಂಪರೆಯನ್ನು ಗಮನದಲ್ಲಿಟ್ಟುಕೊಂಡು ಸರ್ಕಾರದ ಗಮನ ಸೆಳೆಯುವ ಪ್ರಯತ್ನ ಸಮ್ಮೇಳನದ್ದಾಗಿರುತ್ತದೆ.

ರಾಜ್ಯದಲ್ಲಿ 31 ಜಿಲ್ಲೆಗಳನ್ನು ಒಳಗೊಂಡು ಸುಮಾರು 10 ಸಾವಿರ ಕಾರ್ಯನಿರತ ಪತ್ರಕರ್ತರ ಸದಸ್ಯತ್ವ ಹೊಂದಿರುವ ಕೆಯುಡಬ್ಲ್ಯೂಜೆ ರಾಜ್ಯದಲ್ಲೆ ಸರ್ಕಾರದ ಮಾನ್ಯತೆ ಪಡೆದ ಏಕೈಕ ಬೃಹತ್ ಪತ್ರಕರ್ತರ ಸಂಘಟನೆಯಾಗಿದೆ.

ಸರ್ಕಾರ ಮತ್ತು ಕಾರ್ಯನಿರತ ಪತ್ರಕರ್ತರ ನಡುವೆ ಸೇತುವೆಯಂತೆ ಕೆಲಸ ಮಾಡುತ್ತಾ ಸಮಸ್ಯೆಗಳಿಗೆ ಪರಿಹಾರ ಕಂಡುಕೊಳ್ಳುವ ಕೆಲಸ ಮಾಡುತ್ತಿರುವ ಸಂಘ ಯಾವುದೇ ಸಂಘಟನೆಗೆ ಮಾದರಿಯಾಗಲಿದೆ ಎಂಬುದರಲ್ಲಿ ಅತಿಶಯೋಕ್ತಿಯೇನಿಲ್ಲ.

ಇದೀಗ ಬೀದರ್ ನಲ್ಲಿ 40ನೇ ರಾಜ್ಯಸಮ್ಮೇಳನಕ್ಕೆ ಕ್ಷಣ ಗಣನೆ ಆರಂಭವಾಗಿದೆ.

ಏ.11ಮತ್ತು 12 ರಂದು ನಡೆಯಲಿರುವ ಸಮ್ಮೇಳನವನ್ನು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಉದ್ಘಾಟಿಸಲಿದ್ದಾರೆ.

ಉಪಮುಖ್ಯಮಂತ್ರಿ ಡಿ.ಕೆ ಶಿವಕುಮಾರ್, ಜಿಲ್ಲಾ ಉಸ್ತುವಾರಿ ಸಚಿವರಾದ ಈಶ್ವರ ಖಂಡ್ರೆ ಸೇರಿದಂತೆ ಅನೇಕ ಗಣ್ಯರು, ಹಿರಿಯ ಪತ್ರಕರ್ತರು ಸಮ್ಮೇಳನದ ಸೊಬಗು ಹೆಚ್ಚಿಸಲಿದ್ದಾರೆ.

ಪತ್ರಿಕೋದ್ಯಮದ, ಪತ್ರಕರ್ತರ ಕುರಿತಾದ ಗುಣಾತ್ಮಕ ವಿಚಾರಸಂಕಿರಣಗಳು, ಸಮಾಲೋಚನೆಗಳು ಸಮ್ಮೇಳನದ ಭಾಗವಾಗಿವೆ. ಕೆಯುಡಬ್ಲ್ಯೂಜೆ ಕೇವಲ ಸಂಘಟನೆಯಲ್ಲ. ಅದೊಂದು ಭರವಸೆ. ಸುದ್ದಿ ಮನೆಯ ಪತ್ರಕರ್ತರೆಲ್ಲರೂ ಬಸವನ ನಾಡಿಗೆ ಬನ್ನಿ.. ಯಶಸ್ಸಿಗೆ ಕೈ ಜೋಡಿಸಿ.

■ ಶಿವಾನಂದ ತಗಡೂರು
ಅಧ್ಯಕ್ಷರು, ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘ, ಬೆಂಗಳೂರು (ಕೆಯುಡಬ್ಲ್ಯೂಜೆ)



# ಪರಿಶ್ರಮದಿಂದ ಗೆಲುವನ್ನು ಕೊಳ್ಳಬಹುದು

■ ಉದಯರಶ್ಮಿ ದಿನಪತ್ರಿಕೆ

ಜಯ್ ನುಡಿ

(ವ್ಯಕ್ತಿತ್ವ ವಿಕಸನ ಕುರಿತ ಲೇಖನ ಮಾಲಿಕೆ)

ಇಂದಿನ ದಾವಂತದ ಬದುಕಿನಲ್ಲಿ ಎಲ್ಲ ಸುಖಗಳೂ ನಮ್ಮೆಡೆ ತಾವೇ ಬರಲಿ ಎಂದು ಆಶಿಸುತ್ತೇವೆ. ಬೆರಳ ತುದಿಯಲ್ಲಿ ಬೇಕಾದ್ದೆಲ್ಲವೂ ದೊರೆಯುತ್ತಿರುವಾಗ ಗೆಲುವಿಗೆ ಮಾತ್ರ ಇನ್ನಿಲ್ಲದ ಪರಿಶ್ರಮ ಏಕೆ ಪಡಬೇಕು ಎಂದು ಪ್ರಶ್ನಿಸುತ್ತೇವೆ. 'ಕೆಲಸಕ್ಕೆ ಕರೆಯಬೇಡ್ರಿ ಊಟಕ್ಕೆ ಮರೆಯಬೇಡ್ರಿ.' ಅನ್ನೋ ಜಾಯಮಾನದವರನ್ನು ಕಂಡರೆ ಯಶಸ್ಸು ಹತ್ತಿರವೂ ಸುಳಿಯುವುದಿಲ್ಲ. ಶ್ರಮವಿಲ್ಲದೇ ಏನೆಲ್ಲವೂ ತಮ್ಮ ಪಾದದ ಕೆಳಗೆ ಬಿದ್ದಿರುಬೇಕೆಂಬುದು ನಮ್ಮಲ್ಲಿ ಬಹುತೇಕ ಜನರ ಅಭಿಪ್ರಾಯ. ವ್ಯಕ್ತಿತ್ವ ವಿಕಾಸದಲ್ಲಂತೂ ಪರಿಶ್ರಮ ಮೂಲ ವಸ್ತುವಿನಂತೆ ಕಾರ್ಯ ನಿರ್ವಹಿಸುತ್ತದೆ. ಶ್ರಮದ ಬೀಜಕ್ಕೆ ಅಗಾಧ ಶಕ್ತಿ ಇದೆ ಎನ್ನುವುದು ಈಗಾಗಲೇ ಮಹಾನ ಸಾಧಕರು ತೋರಿಸಿಕೊಟ್ಟಿದ್ದಾರೆ ಎಷ್ಟು ಶ್ರಮವಹಿಸಿದರೂ ಅಷ್ಟೇ ಬದುಕು ಅದೃಷ್ಟದಾಟ. ಅದೃಷ್ಟದ ಮುಂದೆ ಪರಿಶ್ರಮವೂ ಒಂದು ಆಟಿಗೆಯಂತೆ.ಎಂದು ನಂಬಿ ಜೀವನವನ್ನು ಅದೃಷ್ಟದ ಕೈಗೆ ಕೊಟ್ಟು ಹಗಲು ರಾತ್ರಿ ಹಲಬುವವರ ಸಂಖ್ಯೆಯೇನೂ ಕಮ್ಮಿಯಿಲ್ಲ. 'ಪರಿಸ್ಥಿತಿಗೆ ಅಂಜಲಾರೆ. ನಾನೇ ಆ ಪರಿಸ್ಥಿತಿಯ ನಿರ್ಮಾತೃ.' ಎಂಬ ನೆಪೋಲಿಯನ್ ಬೊನಾಪಾರ್ಟೆ ಮಾತಿಗೆ ಅಮೂಲ್ಯವಾದ ಬೆಲೆ ನೀಡಿದ ಮಹಾ ಪುರುಷರು ಇತರರಿಗೆ ಆದರ್ಶ ಪ್ರಾಯರಾಗಿದ್ದಾರೆ ಯಾವ ಆಸೆ ಆಮೀಸೆಗಳಿಗೆ ಬಲಿಯಾಗದ, ಎಂಥ ಸಿರಿವಂತಿಕೆಗೂ ದಕ್ಕದ ಗೆಲುವನ್ನು ಪರಿಶ್ರಮದ ಬೆವರಿನಿಂದ ಗಿಟ್ಟಿಸಿಕೊಳ್ಳಬಹುದು. ಅದು ಹೇಗೆ ಎಂಬುದಕ್ಕೆ ಮುಂದಕ್ಕೆ ಓದಿ.

**ಪರಿಶ್ರಮ ಎಂದರೆ...?**

ಗೆಲುವಿಗೆ ಬೇಕಾದ ಮೂಲ ಪರಿಕರ. ಮೂಲ ಬೀಜ. ಮೂಲತಃ ಗೆಲುವಿಗೆ ತಿಳಿಯುವ ಚೆಂದದ ಮೂಲ ಭಾಷೆ. ಪರಿಶ್ರಮ ಹೇಳಿದ ಮಾತನ್ನುಗೆಲುವು ಶಿರಸಾವಹಿಸಿ ಪಾಲಿಸುತ್ತದೆ. ಸ್ವಲ್ಪ ತಡವಾಗಬಹುದು ಅಷ್ಟೆ. ಮನುಷ್ಯನ ಮನಸ್ಸೊಂದು ವಿಚಿತ್ರ. ಅದು ಯಾವ ಯಾವುದೋ ರೂಪದಲ್ಲಿ ರಂಜನೆಯನ್ನು ಪಡೆಯಲು ಸದಾ ಕಾಲ ತುಡಿಯುತ್ತದೆ. ಇನ್ನೂ ವಿಚಿತ್ರವೆಂದರೆ ಪರಿಶ್ರಮವೊಂದನ್ನು ಬಿಟ್ಟು. ಜೇನು ತುಪ್ಪ ಬೇಕಾದವನು ಜೇನುನೊಣಗಳಿಗೆ ಹೆದರಬಾರದು ಎಂಬುದು ದಕ್ಷಿಣ ಆಫ್ರಿಕನ್ ಗಾದೆ. ಗೆಲುವಿನ ಫಲ ಬೇಕೆನ್ನುವವರು ಪರಿಶ್ರಮದ ಬೀಜ ಬಿತ್ತಿ ಸತತ ನೀರೆರೆಯುವುದನು ಮರೆಯಬಾರದು.





**ನಡೆಯದು ಅದೃಷ್ಟದಾಟ**

**ಅದೃಷ್ಟ ಗಾಜಿನಂತೆ**

ಹೊಳಪು ಹೆಚ್ಚಿದಂತೆಲ್ಲ ಬೇಗ ಒಡೆಯಬಲ್ಲದು. ಹಗಲಿರೆಳನ್ನದೇ ಶ್ರಮ ಪಡುತ್ತಿದ್ದರೂ, ಹಣೆಯ ಮೇಲೆ ಬೆವರಿನ ಸಾಲು ಸಾಲುಗಟ್ಟಿದರೂ ಫಲಿತಾಂಶ ಮಾತ್ರ ನನ್ನ ನಿರೀಕ್ಷೆಯನ್ನು ತಲುಪುತ್ತಿಲ್ಲ. ಎಂಬುದು ಕೆಲವರ ಗೊಣಗಾಟ. ವಿಷ್ಣು ಶರ್ಮ ಹೇಳಿದಂತೆ,'ಆಪತ್ತು ಬಂದಾಗ ಬುದ್ಧಿಗೆಡಬಾರದು. 'ಶೇ 99 ರಷ್ಟು ಪ್ರಯತ್ನಕ್ಕೆ ಶೇ 1 ರಷ್ಟು ಅದೃಷ್ಟ ಸೇರಿದಾಗ ಗೆಲುವು. ಶ್ರಮ ಎಂಬುದೊಂದು ದೊಡ್ಡ ಭಾರ ಎಂದು ಹೆಸರಿಟ್ಟು ದೂರ ಸರಿಯುವವರೂ ಇಲ್ಲದಿಲ್ಲ. ಇದನ್ನು ಕಂಡು ರವೀಂದ್ರನಾಥ ಟ್ಯಾಗೋರ್ ಹೀಗೆ ಹೇಳಿದ್ದಾರೆ; ಹೊರೆಯೇ ಮುಖ್ಯವಾಗಿರುವಾಗ ಯಾವ ಭಾರವಾದರೇನು? ಇಟ್ಟಿಗೆಯಾದರೇನು? ಕಲ್ಲಾದರೇನು? ಪ್ರತಿ ಯಶಸ್ವಿ ವ್ಯಕ್ತಿಯ ಹಿಂದೆ ಅಪಾರ ಪರಿಶ್ರಮವಿರುತ್ತದೆ. ಪರಿಶ್ರಮದ ನೋವಿನಲ್ಲೂ ನಲಿವಿದೆ ಗೆಲುವಿದೆ ಹಾಗಾದರೆ ಪರಿಶ್ರಮದ ಬೀಜ ಬಿತ್ತಿ ಗೆಲುವಿನ ಫಲ ಪಡೆಯಬಹುದು. ಭಾಗ್ಯದ ಬೆನ್ನು ಹತ್ತಿ ನಾವು ಓಡುವಂತೆ ಪರಿಶ್ರಮಿಗಳ ಬೆನ್ನು ಹತ್ತಿ ಗೆಲುವು ಓಡುತ್ತದೆ.

ಬೇಡ ಕಣ್ಣೀರಿನ ಉತ್ತರ

ಷೇಕ್ಸಪಿಯರ್ ತನ್ನ ಸಾನೆಟ್ ಒಂದರಲ್ಲಿ 'ಕಾಲದ ಆಘಾತಕ್ಕೆ ಶಿಲಾ ಪ್ರತಿಮೆಗಳು ಒಡೆಯಬಹುದು. ಹೊನ್ನಲೇಪದ ಸ್ಮಾರಕಗಳು ಉರಳಬಹುದು. ಆದರೆ ಕಾವ್ಯ ಮಾತ್ರ ಮೃತ್ಯು ಹಾಗೂ ವಿಸ್ಮೃತಿಗೆ ಅತೀತವಾದುದು.' ಎಂದು ಕಾವ್ಯದ ಅಮರತೆಯ ಕುರಿತು ಹೇಳಿದ ಅದೇ ಮಾತನ್ನು ಪರಿಶ್ರಮಕ್ಕೂ ಅನ್ವಯಿಸಬಹುದು. ಹೆಜ್ಜೆ ಹೆಜ್ಜೆಗೂ ಎದುರಾಗುವ ಸೋಲಿಗೆ ಹೆದರಿ ಹತಾಶೆಯಿಂದ ಕಣ್ಣೀರು ಸುರಿಸುತ್ತೇವೆ. ಸೋಲಿಗೆ ಕಣ್ಣೀರಿನ ಉತ್ತರ ನೀಡುತ್ತೇವೆ. ಸೋಲನ್ನು ಕಣ್ಣೀರಿನ ಕೈಯಲ್ಲಿ ಕೊಟ್ಟು ಕೈ ತೊಳೆದುಕೊಂಡು ಬಿಡುತ್ತೇವೆ. ಕತ್ತಲು ಕೋಣೆಯಲ್ಲಿ ಕಣ್ಣೀರು ಕೆಡವಿ ಮತ್ತೆ ಆಲಸ್ಯತನದ ಮರೆಯಲ್ಲಿ ಮಲಗುವ ಅಭ್ಯಾಸ ಮಾಡಿಕೊಂಡಿದ್ದೇವೆ. ಎಲ್ಲಕ್ಕಿಂತ ಹೆಚ್ಚಾಗಿ ಶ್ರಮವೆಂಬುದು ನಮಗೆ ಕಬ್ಬಿಣದ ಕಡಲೆಯಂತೆ ಕಾಣುತ್ತಿದೆ. ಆಲಸ್ಯವೆಂಬ ಮಾಯೆ ಶ್ರಮವೆಂಬ ಸತ್ಪಥವನ್ನು ನುಂಗಿ ಹಾಕಿ ಬಿಡುತ್ತದೆ. ಶ್ರಮವೆಂಬ ಜಂಜಾಟದಲ್ಲಿ ಬೀಳುವುದಕ್ಕಿಂತ ಕಣ್ಣೀರಿನಲ್ಲಿ ಕೈ ತೊಳೆಯುವುದು ಒಳ್ಳೆಯದು ಎಂದು ಕೊಂಡಿದ್ದೇವೆ. ಮಣ್ಣಿನ ಗಡಿಗೆಯಲಿ ಅಡುಗೆ ಮಾಡಿ ಉಣ್ಣುವುದು ಆರೋಗ್ಯಕ್ಕೆ ಒಳ್ಳೆಯದು. ಆದರೆ ಅದನ್ನೆಲ್ಲ ಪಾಲಿಸೋಕೆ ಸಮಯವೆಲ್ಲಿದೆ? ಶ್ರಮದ ಯೋಚನೆಗಳಿಲ್ಲದೇ ಯೋಜನೆಗಳಿಲ್ಲದೇ ಸ್ಪರ್ಧಾತ್ಮಕ ಯುಗದಲ್ಲಿ ಸುಂದರ ಬದುಕು ಪಡೆಯುವುದು ಕಷ್ಟ.



**ಇರಲಿ ಗಟ್ಟಿ ನಿರ್ಧಾರ**

ಪರಿಶ್ರಮವೆಂಬುದು ಕಿರಿದಾದ ದಾರಿಯಲ್ಲಿ ಅದೂ ಪಾಚಿಗಟ್ಟಿದ ದಾರಿಯಲ್ಲಿ ನಡೆದಂತೆ. ಆದ್ದರಿಂದ ಅದರ ಸಹವಾಸವೇ ಬೇಡ. ಗೆಲುವನ್ನು ಬಾಚಿ ತಬ್ಬಿಕೊಳ್ಳಲು ಸಾಕಷ್ಟು ಅಡ್ಡ ಮಾರ್ಗಗಳಿವೆ. ಅವುಗಳನ್ನು ಅನುಸಿರಿಸುವುದೇ ಸೂಕ್ತ ಎಂದು ಅವುಗಳತ್ತ ಹೆಜ್ಜೆ ಹಾಕಿ ಕೈ ಸುಟ್ಟುಕೊಳ್ಳುತ್ತೇವೆ. ಶಾಶ್ವತ ಗೆಲುವಿನ ನಿಜವಾದ ಕೀಲಿ ಕೈ ಶ್ರಮವೆಂದು ಅರಿಯುವುದರಲ್ಲಿ ಸಾಕಷ್ಟು ಸಮಯ ಸರಿದಿರುತ್ತದೆ. ನೊಂದ ಮನಸ್ಸು ವಿಶ್ರಾಂತಿ ಬೇಕೆಂದು ಅಂಗಲಾಚುತ್ತದೆ. ಆದರೆ ಅದು ವಿಶ್ರಾಂತಿಗೆ ಸಕಾಲವಲ್ಲ. ಪ್ರಖರವಾದ ಪರಿಶ್ರಮಕ್ಕೆ ಒಡ್ಡಿಕೊಳ್ಳಬೇಕಾದ ಕಾಲ.ಮಾಡಿದ ತಪ್ಪಿಗೆ ಬೇರೆ ದಾರಿ ಇಲ್ಲ. ಶ್ರಮದೆಡೆ ಮುಖ ಮಾಡುವುದೊಂದೇ ದಾರಿ. ಪರಿಶ್ರಮವೆಂಬುದು ನಿರಂತರ ಪ್ರಕ್ರಿಯೆ. ಶ್ರಮ ಪಟ್ಟದ್ದು ಸಾಕೆಂದುಕೊಂಡರೆ ಗೆಲುವು ನಿಂತ ನೀರಿನಂತೆ ನಿಲ್ಲುತ್ತದೆ. ಜಗತ್ತಿನ ಸುಪ್ರಸಿದ್ಧ ವಿಜ್ಞಾನಿ ಥಾಮಸ್ ಅಲ್ವಾ ಎಡಿಸನ್, 67 ನೇ ವಯಸ್ಸಿನಲ್ಲಿ ತಾನು ಕಟ್ಟಿ ಬೆಳೆಸಿದ ಫ್ಯಾಕ್ಟರಿ ಹೊತ್ತಿ ಉರಿಯುವುದನ್ನು ಕಂಡು.' ನಿನ್ನ ತಾಯಿ ಮತ್ತು ಆಕೆಯ ಗೆಳತಿಯರನ್ನು ಕರೆ. ಅವರೆಂದೂ ಇಂಥ ದೊಡ್ಡ ಫ್ಯಾಕ್ಟರಿ ಉರಿಯುವ ದೃಶ್ಯವನ್ನು ಕಂಡಿರಲಾರರು.' ಎಂದು ತನ್ನ 24 ವರ್ಷದ ಮಗ ಚಾರ್ಲ್ಸ್ ಹೇಳುತ್ತಾನೆ. ತಂದೆಯ ಮಾತು ಕೇಳಿದ ಮಗ ಗಾಬರಿಯಾಗಿ ಇದೇನು ಹೇಳುತ್ತಿರುವಿರಿ ನೀವು? ಇಷ್ಟು ದಿನ ಶ್ರಮವಹಿಸಿ ಬೆಳೆಸಿದ ನಿಮ್ಮ ಕನಸು ಹೊತ್ತಿ ಉರಿಯುತ್ತಿದೆ ಎಂದ ಸಖೇದ ಆಶ್ಚರ್ಯದಿಂದ. ಅದಕ್ಕೆ ಥಾಮಸ್ ಕೊಟ್ಟ ಉತ್ತರ ಮಾರ್ಮಿಕವಾದುದು. ಪರಿಶ್ರಮ ಪಡುವ ಗಟ್ಟಿ ನಿರ್ಧಾರವಿದ್ದರೆ ಇಂಥ ಎಷ್ಟು ಫ್ಯಾಕ್ಟರಿಗಳನ್ನು ಕಟ್ಟಬಹುದೆಂದ. ಮರು ದಿನದಿಂದಲೇ ಶ್ರಮದ ಬೆವರು ಸುರಿಸಿದ.




**ಪರಿಶ್ರಮವೇ ಕೀಲಿಕೈ**

ಭವಿಷ್ಯವನ್ನು ವರ್ತಮಾನದಿಂದ ಕೊಳ್ಳಬಹುದು ಎಂದಿದ್ದಾರೆ ಡಾ: ಜಾನ್ಸನ್ ಹಾಗೆಯೇ ಗೆಲುವನ್ನು ಪರಿಶ್ರಮದಿಂದ ಕೊಳ್ಳಬಹುದು. ವರ್ತಮಾನದಲ್ಲಿ ನಾವು ತೊಡಗಿಸಬೇಕಾದ ಬಂಡವಾಳವೆಂದರೆ ಪರಿಶ್ರಮ. ಎಲ್ಲರ ಮನ ಸೆಳೆಯುವ ಬಣ್ಣ ಬಣ್ಣದ ಚಿಟ್ಟೆ ಆಗಬೇಕಾದರೆ ಕಂಬಳಿಹುಳ ಪಡುವ ನೋವು ಅಷ್ಟಿಷ್ಟಲ್ಲ. ಸಾಧಕರ ಯಶೋಗಾಥೆಯನ್ನು ಓದುವಾಗ ಅಥವಾ ಕೇಳುವಾಗ ಸ್ಪಷ್ಟವಾಗುವ ಅಂಶವೆಂದರೆ, 'ಕೆತ್ತಿಸಿಕೊಳ್ಳುವ ತಾಳ್ಮೆ ಇಲ್ಲದವರು ವಿಗ್ರಹವಾಗಲು ಹಂಬಲಿಸಬಾರದು. ಕಲ್ಲಾಗಿಯೇ ಇದ್ದು ಬಿಡಬೇಕು.' ರಭಸವಾದ ಅಲೆಗಳಂತೆ ಬಂದ ಸಮಸ್ಯೆಗಳಿಗೆ ತಮ್ಮ ಛಲ ಬಿಡದ ಪರಿಶ್ರಮದಿಂದಲೇ ಎದೆಯನ್ನೊಡ್ಡಿ ದಿಟ್ಟ ಉತ್ತರ ನೀಡಬೇಕು.. ಆಂಡ್ರೂ ಕಾರ್ನೆಗಿ, ಅಮೇರಿಕದ ಸ್ಟೀಲ್ ರಂಗದಲ್ಲಿ ಬಹು ದೊಡ್ಡ ಹೆಸರು. ಆತ ಹನ್ನೊಂದು ವರ್ಷದ ಪುಟ್ಟ ಪೋರನಾಗಿದ್ದಾಗ ಕಾರ್ಮಿಕನಾಗಿದ್ದ. ಛಲ ಬಿಡದ ತ್ರಿವಿಕ್ರಮನಂತೆ ಶ್ರಮವಹಿಸಿ ತಾನು ಶ್ರೀಮಂತನಾಗುವುದಲ್ಲದೇ ನೂರಾರು ಜನ ಬಿಲಿಯನರ್‌ಗಳನ್ನು ಸೃಷ್ಟಿಸಿದ. ಇದನ್ನು ಅವಲೋಕಿಸಿದಾಗ ಗೆಲುವನ್ನು ಪರಿಶ್ರಮದಿಂದ ಕೊಳ್ಳಬಹುದು ಎಂಬುದು ಸ್ಪಷ್ಟವಾಗುತ್ತದೆ. ಹಾಗಾದರೆ ಬನ್ನಿ ಸೋಲೆಂಬ ಅವಮಾನಕ್ಕೆ ಉತ್ತರವನ್ನು ಪರಿಶ್ರಮದಿಂದ ಕೊಡೋಣ. ಗೆಲುವಿನ ದಾರಿಯಲ್ಲಿ ನಗು ನಗುತ ಹೆಜ್ಜೆ ಹಾಕೋಣ.

ಲೇಖನ.
■ ಜಯಶ್ರೀ.ಜೆ. ಅಬ್ಬಿಗೇರಿ
ಇಂಗ್ಲೀಷ ಉಪನ್ಯಾಸಕರು
ಬೆಳಗಾವಿ
ಮೊ: 9449234142



## ಜನಗಣತಿ ಕಾರ್ಯ ಹಬ್ಬವಿದ್ದಂತೆ : ತಹಶಿಲ್ದಾರ ಚವಲರ




■ ಉದಯರಶ್ಮಿ ದಿನಪತ್ರಿಕೆ

ತಿಕೋಟಾ: ಜನಗಣತಿ ಕಾರ್ಯ ಒಂದು ಹಬ್ಬವಿದ್ದಂತೆ. ಡಿಜಿಟಲ್ ಮಾದರಿ ಜನಗಣತಿ ಕಾರ್ಯ ಮಾಡುವ ಮೂಲಕ ಶಿಕ್ಷಕರು ಉತ್ತಮ ಕರ್ತವ್ಯದೊಂದಿಗೆ ಹಬ್ಬದಂತೆ ಯಶಸ್ವಿಗೊಳಿಸಬೇಕು ಎಂದು ತಹಶಿಲ್ದಾರ ಸುರೇಶ ಚವಲರ ಹೇಳಿದರು.

ಪಟ್ಟಣದ ಎ.ಬಿ.ಜತ್ತಿ ಪದವಿಪೂರ್ವ ಮಹಾವಿಧ್ಯಾಲಯದಲ್ಲಿ ತಾಲ್ಲೂಕ ಆಡಳಿತ ಹಾಗೂ ಪಟ್ಟಣ ಪಂಚಾಯತಿ ಸಹಯೋಗದಲ್ಲಿ ಭಾರತದ ಜನಗಣತಿ 2027 ನಿಮಿತ್ಯ ಗಣತಿದಾರರು ಹಾಗೂ ಮೇಲ್ವಿಚಾರಕರಿಗೆ ಮಂಗಳವಾರ ನಡೆದ ತರಬೇತಿ ಕಾರ್ಯಗಾರದ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಶಿಕ್ಷಕರು ಜವಾಬ್ದಾರಿಯಿಂದ ಕರ್ತವ್ಯ ನಿರ್ವಹಿಸತ್ತಾರೆ ಎಂಬ ವಿಶ್ವಾಸವಿದೆ. ನಿಗದಿಪಡಿಸಿದ ನಕ್ಷೆಯನ್ನು ತಯಾರಿಸಿಕೊಂಡರೆ ಮೊದಲ ಹಂತದ ಮನೆಗಳ ಪಟ್ಟಿ ಕಾರ್ಯ ಮಾಡಲು ಸುಲಭವಾಗುತ್ತದೆ. ಭಾರತದ ಸಾಮಾಜಿಕ, ಆರ್ಥಿಕ, ಶೈಕ್ಷಣಿಕ ಸ್ಥಿತಿ ತಿಳಿಯಲು ಜನಗಣತಿಯೇ ಮೂಲ ಆಧಾರವಾಗಿರುತ್ತದೆ. ಆದ್ದರಿಂದ ಪರಿಪೂರ್ಣ ಮಾಹಿತಿಯೊಂದಿಗೆ ಕರ್ತವ್ಯ ನಿರ್ವಹಿಸಿ ಗಣತಿ ಕಾರ್ಯ ಯಶಸ್ವಿಯಾಗಿಸಬೇಕು ಎಂದರು.

ಈ ಸಂದರ್ಭದಲ್ಲಿ ಪಟ್ಟಣ ಪಂಚಾಯತಿ ಮುಖ್ಯಾಧಿಕಾರಿ ರಘು ನಡುವಿನಮನಿ, ಉಪತಹಶಿಲ್ದಾರ ಎಚ್.ಎನ್.ಬಡಿಗೇರ, ಎಸ್.ಬಿ.ಬಿರಾದರ, ಅನೀಲ ಕೊಟ್ಯಾಳ, ಪ್ರವೀಣ ಬಸರಕೋಡ, ಸಂತೋಷ ಹೆಗಡೆ, ರಮೇಶ ಚವ್ಹಾಣ ಇದ್ದರು.

## ಸೆ.10 ರಿಂದ ವಿಜಯಪುರದಲ್ಲಿ ಭಾರತೀಯ ಸೇನಾ ನೇಮಕಾತಿ ಬೃಹತ್ ರ್‍ಯಾಲಿ

### ಅಗ್ನಿವೀರರ ನೇಮಕಾತಿ ರ್‍ಯಾಲಿ ಸಿದ್ಧತೆಗೆ ಜಿಲ್ಲಾಧಿಕಾರಿ ಡಾ. ಆನಂದ ಕೆ. ಅಧಿಕಾರಿಗಳಿಗೆ ಸೂಚನೆ

■ ಉದಯರಶ್ಮಿ ದಿನಪತ್ರಿಕೆ

ವಿಜಯಪುರ: ಐತಿಹಾಸಿಕ ವಿಜಯಪುರದಲ್ಲಿ ಮಂಗಳೂರಿನ ಸೇನಾ ನೇಮಕಾತಿ ಕಚೇರಿ ವತಿಯಿಂದ ಅಗ್ನಿಪಥ್ ಯೋಜನೆಯಡಿ ಭಾರತೀಯ ಸೇನಾ ನೇಮಕಾತಿ ಬೃಹತ್ ರ್‍ಯಾಲಿ ನಗರದಲ್ಲಿ ಸೆಪ್ಟೆಂಬರ್ 10 ರಿಂದ 30ರವರೆಗೆ ನಡೆಯಲಿದೆ ಎಂದು ಜಿಲ್ಲಾಧಿಕಾರಿಗಳಾದ ಡಾ. ಆನಂದ ಕೆ. ಅವರು ತಿಳಿಸಿದರು.

ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಮಂಗಳವಾರ ಜರುಗಿದ ಅಗ್ನಿಪಥ ನೇಮಕಾತಿ ರ್‍ಯಾಲಿಯ ಪೂರ್ವ ಸಿದ್ಧತೆ ಕುರಿತಂತೆ ಸೇನಾ ನೇಮಕಾತಿ ಅಧಿಕಾರಿಗಳು ಹಾಗೂ ಜಿಲ್ಲಾ ಮಟ್ಟದ ವಿವಿಧ ಇಲಾಖಾ ಅಧಿಕಾರಿಗಳೊಂದಿಗೆ ನಡೆದ ಸಭೆಯಲ್ಲಿ ಅವರು ಮಾತನಾಡಿದರು. ವಿಜಯಪುರ ಜಿಲ್ಲೆಯು ಒಳಗೊಂಡಂತೆ ರಾಜ್ಯದ 11 ಜಿಲ್ಲೆಗಳ ಅಭ್ಯರ್ಥಿಗಳು ಈ ರ್‍ಯಾಲಿಯಲ್ಲಿ ಭಾಗವಹಿಸಲಿದ್ದಾರೆ. ಈ ಅವಧಿಯಲ್ಲಿ ಪ್ರತಿದಿನ ಅಂದಾಜು 800 ಅಭ್ಯರ್ಥಿಗಳಿಗೆ ರ್‍ಯಾಲಿಯಲ್ಲಿ ಭಾಗವಹಿಸಲಿದ್ದಾರೆ ಎಂದರು.

ಅಗ್ನಿವೀರರ ಆಯ್ಕೆ ಪ್ರಕ್ರಿಯೆಯ ರ್‍ಯಾಲಿಯ ದೈಹಿಕ ಪರೀಕ್ಷೆ ಹಾಗೂ ವೈದ್ಯಕೀಯ ಪರೀಕ್ಷೆಗಳು ಸೆಪ್ಟೆಂಬರ್ 10 ರಿಂದ 30ರವರೆಗೆ ನಡೆಯಬಹುದಾಗಿದೆ. ನಗರದ ಡಾ. ಬಿ.ಆರ್.ಅಂಬೇಡ್ಕರ್ ಜಿಲ್ಲಾ ಕ್ರೀಡಾಂಗಣದಲ್ಲಿ ಈ ಬೃಹತ್ ನೇಮಕಾತಿ ರ್‍ಯಾಲಿ ನಡೆಯಲಿದೆ ಎಂದರು.

ಜಿಲ್ಲಾ ಕ್ರೀಡಾಂಗಣದಲ್ಲಿ ನಡೆಯಲಿರುವ ಅಗ್ನಿಪಥ್ ಆಯ್ಕೆ ಪ್ರಕ್ರಿಯೆಯಲ್ಲಿ ದೈಹಿಕ ಪರೀಕ್ಷೆ, ವೈದ್ಯಕೀಯ ಪರೀಕ್ಷೆ ಹಾಗೂ ದಾಖಲಾತಿ ಪರಿಶೀಲನಾ ಪ್ರಕ್ರಿಯೆ ನಡೆಯಲಿವೆ ಎಂದರು.

ಜಿಲ್ಲಾಡಳಿತದಿಂದ ಸೇನಾ ನೇಮಕಾತಿ ಅಧಿಕಾರಿಗಳು ತಿಳಿಸಿದಂತೆ, ಈ ಅವಧಿಯಲ್ಲಿ ಬೇಕಾದ ಎಲ್ಲ ವ್ಯವಸ್ಥೆ ಕಲ್ಪಿಸಲಾಗುವುದು ಎಂದರು. ಪ್ರತಿ ದಿನ ಬೆಳಿಗ್ಗೆ 5 ಗಂಟೆಯಿಂದಲೇ ಆಯ್ಕೆ ಪ್ರಕ್ರಿಯೆ ಪ್ರಾರಂಭಗೊಳ್ಳುತ್ತದೆ. ಅಂದಾಜು ಹತ್ತು ಸಾವಿರದಷ್ಟು ಅಭ್ಯರ್ಥಿಗಳು ಆಯ್ಕೆ ಪ್ರಕ್ರಿಯೆಯಲ್ಲಿ ಪಾಲ್ಗೊಳ್ಳಲಿದ್ದಾರೆ. ಸೇನಾ ನೇಮಕಾತಿ ವಿಭಾಗದಿಂದ ಅಧಿಕಾರಿಗಳು ಆಗಮಿಸಲಿದ್ದಾರೆ ಎಂದರು.

**ರ್‍ಯಾಲಿ ನಡೆಯುವ ಸ್ಥಳ**

ನೇಮಕಾತಿ ರ್‍ಯಾಲಿಯನ್ನು ನಗರದ ಡಾ. ಬಿ.ಆರ್. ಅಂಬೇಡ್ಕರ್ ಕ್ರೀಡಾಂಗಣದಲ್ಲಿ ನಡೆಸಲು ನಿರ್ಧರಿಸಲಾಗಿದೆ. ಒಳಾಂಗಣ ಬ್ಯಾಡ್ಮಿಂಟನ್ ಕೋರ್ಟ್ ಮತ್ತು ಶೆಡ್‌ಗಳು ಸೇರಿದಂತೆ ಸಿಂಥೆಟಿಕ್ ಟ್ರಾಕ್ ಮತ್ತಿತರೆ ಮೂಲಸೌಕರ್ಯಗಳ ಲಭ್ಯತೆಯು ನೇಮಕಾತಿ ರ್‍ಯಾಲಿಗೆ ಅನುಕೂಲ ಕಲ್ಪಿಸಬೇಕು ಎಂದು ಅಧಿಕಾರಿಗಳಿಗೆ ಸೂಚಿಸಿದರು.

ಅಭ್ಯರ್ಥಿಗಳ ವೈದ್ಯಕೀಯ ಪರೀಕ್ಷೆಗಳನ್ನು ನಡೆಸಲು ಬ್ಯಾಡ್ಮಿಂಟನ್ ಕೋರ್ಟ್ ಬಳಸಿಕೊಳ್ಳಲು ಸೇನಾಧಿಕಾರಿಗಳು ತಿಳಿಸಿದ್ದಾರೆ ಎಂದು ಜಿಲ್ಲಾಧಿಕಾರಿಗಳು ತಿಳಿಸಿದ್ದಾರೆ.



**ಜಲನಿರೋಧಕ ಟೆಂಟ್**

ರ್‍ಯಾಲಿ ವೇಳೆ ಅಭ್ಯರ್ಥಿಗಳು ಕಾಯುವ ಅಥವಾ ಮೌಲ್ಯಮಾಪನಕ್ಕೊಳಪಡುವ ಸಾಧ್ಯತೆಯಿರುವುದರಿಂದ ರ್‍ಯಾಲಿ ಸ್ಥಳದಲ್ಲಿ ಜಲನಿರೋಧಕ ಟೆಂಟ್‌ಗಳನ್ನು ಹಾಕಲು ನಿರ್ಧರಿಸಲಾಗಿದ್ದು, ಟೆಂಟ್‌ನಲ್ಲಿ ಟೇಬಲ್ ಮತ್ತು ಕುರ್ಚಿ ವ್ಯವಸ್ಥೆ ಮಾಡಲಾಗುವುದು ಎಂದವರು ತಿಳಿಸಿದ್ದಾರೆ.

**ಬ್ಯಾರಿಕೇಡ್**

ರ್‍ಯಾಲಿಗೆ ಪ್ರವೇಶ ನಿಯಂತ್ರಣ, ಜನಸಂದಣಿ ನಿರ್ವಹಣೆ ಮತ್ತು ಓಟದ ಪರೀಕ್ಷೆಯನ್ನು ಸರಾಗವಾಗಿ ನಡೆಸುವ ನಿಟ್ಟಿನಲ್ಲಿ ರ್‍ಯಾಲಿ ನಡೆಯುವ ಸ್ಥಳದ ಒಳ ಮತ್ತು ಹೊರಗೆ ಬ್ಯಾರಿಕೇಡ್ ಹಾಕಲು ಕ್ರಮವಹಿಸಿ,ನೇಮಕಾತಿ ಅಧಿಕಾರಿಗಳು ಹಾಗೂ ಭಾಗವಹಿಸುವ ಅಭ್ಯರ್ಥಿಗಳಿಗೆ ಕುಡಿಯುವ ನೀರಿನ ಸೌಲಭ್ಯ ಕಲ್ಪಿಸಲಾಗುವುದು.

ವೈದ್ಯಕೀಯ ಸೌಲಭ್ಯ

ಪರೀಕ್ಷೆಗೆ ಒಳಪಡುವ ಅಭ್ಯರ್ಥಿಗಳ ಹಿತದೃಷ್ಟಿಯಿಂದ ವೈದ್ಯರು, ನರ್ಸಿಂಗ್ ಸಹಾಯಕರು ಮತ್ತು ಆಂಬ್ಯುಲೆನ್ಸ್ ಸೌಲಭ್ಯ ಕಲ್ಪಿಸಲು ಸೂಚಿಸಿದರು.

**ವಿದ್ಯುತ್ ಬೆಳಕು**

ಕ್ರೀಡಾಂಗಣದಲ್ಲಿ ನೇಮಕಾತಿ ಸುಸೂತ್ರವಾಗಿ ನಡೆಯಬೇಕೆಂಬ ದೂರದೃಷ್ಟಿಯಿಂದ ನಿರಂತರ ವಿದ್ಯುತ್ ಸೌಲಭ್ಯ ಒದಗಿಸಲು,

ಇಂಟರ್ನೆಟ್ ಸಂಪರ್ಕ: ಅಭ್ಯರ್ಥಿಗಳ ಆಯ್ಕೆ ಪ್ರಕ್ರಿಯೆಯ ಅಗತ್ಯವಿರುವ ವಿವಿಧ ವ್ಯವಸ್ಥೆಗಳಿಗೆ ಆಪ್ಟಿಕಲ್ ಫೈಬರ್ ಸಂಪರ್ಕ ಮತ್ತು ಇಂಟರ್ನೆಟ್ ಸಂಪರ್ಕವನ್ನು ಸ್ಥಾಪಿಸಲು ಬಿಎಸ್ ಎನ್ ಎಲ್ ಅಧಿಕಾರಿಗಳಿಗೆ ಸೂಚಿಸಲಾಯಿತು.

**ಸಿಸಿಟಿವಿ ಕ್ಯಾಮೆರಾ**

ಸ್ಥಳದಲ್ಲಿ ಭದ್ರತೆ, ರಕ್ಷಣೆ, ಕಾನೂನು ಮತ್ತು ಸುವ್ಯವಸ್ಥೆ ಕಾಪಾಡಿಕೊಳ್ಳಲು ಸಿಸಿಟಿವಿ ಕ್ಯಾಮೆರಾ ಅಳವಡಿಸುವಂತೆ ಎಲ್ಲರಿಗೂ ಅಗತ್ಯವಾದ ಮೂಲ ಸೌಕರ್ಯಗಳನ್ನು ಕಲ್ಪಿಸಬೇಕು. ಸಾರಿಗೆ ವ್ಯವಸ್ಥೆ, ವಸತಿ ವ್ಯವಸ್ಥೆ, ಸ್ವಚ್ಛತಾ ವ್ಯವಸ್ಥೆ, ತಾತ್ಕಾಲಿಕ ವಸತಿ ವ್ಯವಸ್ಥೆ, ಸೇನಾ ನೇಮಕಾತಿಗೆ ಅನುಗುಣವಾಗಿ ಜಿಲ್ಲಾ ಕ್ರೀಡಾಂಗಣ ಸಿದ್ಧಗೊಳಿಸುವ ಕಾರ್ಯವನ್ನು ಸ್ಥಳೀಯ ಅಧಿಕಾರಿಗಳು ಕೈಗೊಳ್ಳಬೇಕಾಗಿರುವುದರಿಂದ ನೇಮಕಾತಿ ಪ್ರಾಧಿಕಾರದ ಅಧಿಕಾರಿಗಳ ಅವಶ್ಯಕತೆ ಹಾಗೂ ಮಾರ್ಗದರ್ಶನದಂತೆ ವ್ಯವಸ್ಥೆ ಮಾಡಬೇಕು. ಯಾವುದೇ ಲೋಪವಾಗಬಾರದು ಎಂದು ಅಧಿಕಾರಿಗಳಿಗೆ ಸೂಚಿಸಿದರು.

ಸೆಪ್ಟೆಂಬರ್ ನಲ್ಲಿ ಕ್ರೀಡಾಂಗಣದಲ್ಲಿ ನಡೆಯಬಹುದಾದ ಕ್ರೀಡಾಕೂಟಗಳನ್ನು ಮರು ನಿಗದಿಗೊಳಿಸಬೇಕು ಎಂದು ಜಿಲ್ಲಾ ಯುವಜನ ಸೇವೆ ಮತ್ತು ಕ್ರೀಡಾಧಿಕಾರಿಗೆ ಜಿಲ್ಲಾಧಿಕಾರಿ ಸೂಚಿಸಿದರು. ಅಂದಾಜು15 ದಿನಗಳ ಕಾಲ ನಡೆಯುವ ನೇಮಕಾತಿ ರ್‍ಯಾಲಿಯಲ್ಲಿ ವಿವಿಧ ಜಿಲ್ಲೆಯ ಅಭ್ಯರ್ಥಿಗಳು ಭಾಗವಹಿಸಲು ಯಾವುದೇ ಅನಾನುಕೂಲವಾಗದ ನಿಟ್ಟಿನಲ್ಲಿ ಅಗತ್ಯ ವ್ಯವಸ್ಥೆ ಕೈಗೊಳ್ಳಲು ಸೂಚಿಸಲಾಯಿತು.

**ಪೋಲಿಸ್ ಬಂದೋಬಸ್ತ್**

"ಪ್ರವೇಶ ನಿಯಂತ್ರಣ, ಜನಸಂದಣಿ ನಿರ್ವಹಣೆ ಮತ್ತು ರ್‍ಯಲಿ ಸುಗಮವಾಗಿ ನಡೆಸಲು ನೇಮಕಾತಿ ಸ್ಥಳದ ಒಳ ಮತ್ತು ಹೊರಗೆ ಬಿಗಿ ಪೊಲೀಸ್ ಬಂದೋಬಸ್ತ್ ನಿಯೋಜಿಸಲಾಗುವುದು."


■ ಲಕ್ಷ್ಮಣ ನಿಂಬರಗಿ
ವಿಜಯಪುರ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ

ವೈದ್ಯಕೀಯ ತಂಡವನ್ನು ಪಾಳಿಯಂತೆ ನೇಮಿಸಬೇಕು. ದಾಖಲೆಗಳ ಪರಿಶೀಲನೆಗೆ ಕಂದಾಯ,ಶಿಕ್ಷಣ ಹಾಗೂ ಕ್ರೀಡಾ ಇಲಾಖೆಯ ಅಧಿಕಾರಿಗಳನ್ನು ಆಯ್ಕೆ ಪ್ರಕ್ರಿಯೆ ನಡೆಯುವ ಅವಧಿಗೆ ನಿಯೋಜಿಸಬೇಕು. ವಸತಿ ವ್ಯವಸ್ಥೆ ಕಲ್ಪಿಸಲಾಗುವ ಸ್ಥಳ ಹಾಗೂ ಕ್ರೀಡಾಂಗಣದ ಹೊರಾಂಗಣದಲ್ಲಿ ಸ್ವಚ್ಛತೆ ಕೈಗೊಳ್ಳಲು ಪಾಲಿಕೆ ಅಧಿಕಾರಿಗಳಿಗೆ ಸೂಚಿಸಲಾಯಿತು.

ಅಗ್ನಿಪಥ್ ನೇಮಕಾತಿ ವಿಭಾಗದ ಅಧಿಕಾರಿ ಕರ್ನಲ್ ಸೋಮು ಮಹಾರಾಜನ್ ಅವರು ಮಾತನಾಡಿ, ಹತ್ತು ಸಾವಿರ ಅಭ್ಯರ್ಥಿಗಳು ಅಗ್ನಿವೀರರ ನೇಮಕಾತಿಯಲ್ಲಿ ಭಾಗವಹಿಸುವ ನಿರೀಕ್ಷೆ ಇದೆ. ದಿನಕ್ಕೆ 800 ಅಭ್ಯರ್ಥಿಗಳ ದೈಹಿಕ ಪರೀಕ್ಷೆ, ವೈದ್ಯಕೀಯ ಪರೀಕ್ಷೆ ನಡೆಸಲಾಗುವುದು. ದಾಖಲೆಗಳ ಪರಿಶೀಲನೆ ಸಹ ನಡೆಸಲಾಗುವುದು ಅಗತ್ಯ ಸೌಲಭ್ಯಗಳ ಕುರಿತಂತೆ ಮಾಹಿತಿ ನೀಡಿದರು.

ಸಭೆಯಲ್ಲಿ ಕರ್ನಲ್ ಬಿಕೆಕೆ ವಂಶಿ, ಆಹಾರ ಇಲಾಖೆಯ ಹಾಗೂ ಸೈನಿಕ ಕಲ್ಯಾಣ ಹಾಗೂ ಪುನರ್ವಸತಿ ಇಲಾಖೆಯ ಉಪ ನಿರ್ದೇಶಕರಾದ ವಿನಯಕುಮಾರ ಪಾಟೀಲ, ಕ್ರೀಡಾಧಿಕಾರಿ ರಾಜಶೇಖರ ದೈವಾಡಿ, ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆಯ ಉಪ ನಿರ್ದೇಶಕ ವೀರಯ್ಯ ಸಾಲಿಮಠ ಸೇರಿದಂತೆ ಜಿಲ್ಲಾ ಮಟ್ಟದ ಅಧಿಕಾರಿಗಳು ಉಪಸ್ಥಿತರಿದ್ದರು.

## ದೇಶಕ್ಕೆ ಬಾಬೂಜಿಯವರ ಕೊಡುಗೆ ಅಪಾರ



ಕಲಬುರಗಿ : 'ಬಾಬೂಜಿ' ಎಂದು ಖ್ಯಾತಿ ಹೊಂದಿರುವ ಡಾ.ಬಾಬು ಜಗಜೀವನರಾಂ ಅವರು ಭಾರತದ ಸ್ವಾತಂತ್ರ್ಯ ಹೋರಾಟಗಾರ, ಮಹಾನ್ ದಲಿತ ನಾಯಕ ಮತ್ತು ಮಾಜಿ ಉಪ ಪ್ರಧಾನಿ. ಹಸಿರು ಕ್ರಾಂತಿಯ ಹರಿಕಾರರಾಗಿ ಮತ್ತು ಸುದೀರ್ಘ ಕಾಲ ಸಂಸತ್ ಸದಸ್ಯರಾಗಿ (34 ವರ್ಷ) ದೇಶಸೇವೆ ಸಲ್ಲಿಸುವ ಮೂಲಕ ದೇಶಕ್ಕೆ ಅಪಾರವಾದ ಕೊಡುಗೆಯನ್ನು ನೀಡಿದ್ದಾರೆ ಎಂದು ಉಪನ್ಯಾಸಕ ಎಚ್.ಬಿ.ಪಾಟೀಲ ಹೇಳಿದರು. ನಗರದ ಆಳಂದ ರಸ್ತೆಯ ಸಂತೋಷ ಕಾಲನಿ ಕ್ರಾಸ್ ಸಮೀಪದ 'ರಿಪಬ್ಲಿಕ್ ಸ್ಪೋಕನ್ ಇಂಗ್ಲೀಷ್ ಅಕಾಡೆಮಿ'ಯಲ್ಲಿ 'ಬಸವೇಶ್ವರ ಸಮಾಜ ಸೇವಾ ಬಳಗ'ದ ವತಿಯಿಂದ ಭಾನುವಾರ ಜರುಗಿದ 'ಡಾ.ಬಾಬು ಜಗಜೀವನರಾಂ ಅವರ 119ನೇ ಜಯಂತಿ'ಯ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು. ಚಿಂತಕ ಡಾ.ರಾಜಶೇಖರ ಪಾಟೀಲ ಮಾತನಾಡಿ, ಡಾ.ಬಾಬೂಜಿಯವರ ಜನ್ಮದಿನವನ್ನು 'ಸಮತಾ ದಿವಸ್' ಎಂದು ಆಚರಿಸಲಾಗುತ್ತದೆ. ಏಕೆಂದರೆ ಅವರು ಸಾಮಾಜಿಕ ಸಮಾನತೆಗಾಗಿ ನಿರಂತರವಾಗಿ ಹೋರಾಡಿದ್ದಾರೆ. ಅವರಲ್ಲಿರುವ ದೇಶ, ಸಮಾಜಪರ ಕಾಳಜಿ ಮಾದರಿಯಾಗಿದೆ ಎಂದರು. ಕಾರ್ಯಕ್ರಮದಲ್ಲಿ ಸಂಸ್ಥೆಯ ಅಧ್ಯಕ್ಷ ದತ್ತು ಹಡಪದ, ನಿವೃತ್ತ ಕೃಷಿ ಅಧಿಕಾರಿ ಶಿವಯೋಗೆಪ್ಪಾ, ಪ್ರಮುಖರಾದ ದಿನೇಶ್ ಮಿಶ್ರಾ, ಪ್ರವೀಣ ತಿವಾರಿ ಸೇರಿದಂತೆ ಇನ್ನಿತರರಿದ್ದರು.

## ಅದ್ದೂರಿಯಾಗಿ ಜರುಗಿದ ಡಾ.ಬಾಬು ಜಗಜೀವನರಾಮ್ ಜಯಂತೋತ್ಸವ

ಚಿಂಚೋಳಿ: ತಹಸಿಲ್ ಕಾರ್ಯಾಲಯದಲ್ಲಿ ಹಸಿರು ಕ್ರಾಂತಿಯ ಹರಿಕಾರ ಭಾರತ ಮಾಜಿ ಉಪ ಪ್ರಧಾನಿಗಳಾದ ಡಾ. ಬಾಬು ಜಗಜೀವನರಾಮ್ ಅವರ 119ನೇ ಜಯಂತೋತ್ಸವ ಆಚರಣೆ ಕಾರ್ಯಕ್ರಮ ಹಮ್ಮಿಕೊಳ್ಳಲಾಯಿತು ಚಿಂಚೋಳಿಯಲ್ಲಿ ಬೆಳಗ್ಗೆ 9 ಗಂಟೆಗೆ ಡಾ. ಬಿ ಆರ್ ಅಂಬೇಡ್ಕರ್ ವತದಿಂದ ಡಾ. ಬಾಬು ಜಗಜೀವನರಾಮ್ ಅವರ ಭಾವಚಿತ್ರದೊಂದಿಗೆ ಬೃಹತ್ ಮೆರವಣಿಗೆಯನ್ನು ಪ್ರಜಾಸೌಧದ ಕಾರ್ಯಾಲಯ ವರೆಗೆ ಮೆರವಣಿಗೆಯನ್ನು ಮಾಡಲಾಯಿತು ಕಾರ್ಯಕ್ರಮದ ಉದ್ದೇಶಿಸಿ ಕಾರ್ಯಕ್ರಮದ ವಿಶೇಷ ಉಪನ್ಯಾಸವನ್ನು ಕಲಬುರ್ಗಿ ವಿಶ್ವವಿದ್ಯಾಲಯದ ಇತಿಹಾಸ ಪ್ರಾಧ್ಯಾಪಕರಾದ ಡಾ. ಮಲ್ಲಿಕಾರ್ಜುನ್ ಸಾವರ್ಕರ್, ಅವರು ಮಾತನಾಡಿ ಹಸಿರು ಕ್ರಾಂತಿಯ ಹರಿಕಾರ ಭಾರತ ಮಾಜಿ ಉಪ ಪ್ರಧಾನಿಗಳಾದ ಡಾ. ಬಾಬು ಜಗಜೀವನರಾಮ್, ಅವರ ತತ್ವ ಸಿದ್ಧಾಂತವನ್ನು ನಾವೆಲ್ಲರೂ ಅಳವಡಿಸಿಕೊಳ್ಳಬೇಕು ಅವರ ಮಾರ್ಗದರ್ಶನದಲ್ಲಿ ನಾವೆಲ್ಲರೂ ನಡೆಯಬೇಕು ಎಂದು ಹೇಳಿದರು ಕಾರ್ಯಕ್ರಮದಲ್ಲಿ ತಹಸೀಲ್ದಾರ್ ಸುಬ್ಬಣ್ಣ ಜಮಖಂಡಿ, ಗ್ರೇಟ್ ತಹಸೀಲ್ದಾರ ವೆಂಕಟೇಶ್ ದುಗ್ಗನ್, ತಾಲೂಕ ಪಂಚಾಯತ ಕಾರ್ಯನಿರ್ವಹಕ ಅಧಿಕಾರಿಗಳಾದ ಸಂತೋಷ್ ಚೌವ್ಹಾಣ, ಸಮಾಜ ಕಲ್ಯಾಣ ಇಲಾಖೆಯ ಅಧಿಕಾರಿಗಳಾದ ಡಾ. ಶೃತಿ ಎಮ್, ಪುರಸಭೆ ಅಧಿಕಾರಿಗಳಾದ ಕಾಶಿನಾಥ ಧನ್ನಿ,ಬಿಸಿಎಮ್ ತಾಲೂಕಾಧಿಕಾರಿಗಳಾದಅನುಸೂಯ ಚೌವ್ಹಾಣ, ತಾಲೂಕ ವೈದ್ಯಾಧಿಕಾರಿಗಳಾದ ಡಾ. ಮಮ್ಮದ್ ಗಫರ, ತಾಲೂಕ , ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರ ಅಧ್ಯಕ್ಷರಾದ ಬಸವರಾಜ ಮಲಿ, ಕಲಬುರಗಿ ಜಿಲ್ಲಾ ಕರ್ನಾಟಕ ಮಾದರ ಮಹಾಸಭಾ ಅಧ್ಯಕ್ಷರಾದ ಗೋಪಾಲರಾವ' ಮತ್ತು ಅನೇಕ ಮಾದಿಗ ಸಮಾಜದ ಮುಖಂಡರು ಹಾಗೂ ವಿವಿಧ ಇಲಾಖೆ ಅಧಿಕಾರಿಗಳು ಕಾರ್ಯಕ್ರಮದಲ್ಲಿ ಭಾಗವಹಿಸಿದ್ದರು

# ಬಂಜರು ನೆಲದಲ್ಲೂ ವಿದೇಶಿ ತಳಿ ಮಾವು ಬೆಳೆದ ರಾಜಶ್ರೀ ಜೈನ

■ ಉದಯರಶ್ಮಿ ದಿನಪತ್ರಿಕೆ

ಇಂಡಿ: ಹಲವು ವರ್ಷಗಳಿಂದ ಬಂಜರು ಬಿದ್ದ ಭೂಮಿಯಲ್ಲಿ ಸಧ್ಯ ಮಿಯಾ ಜೋಕಿ, ಬನಾನಾ ಮಾವಿನ ಹಣ್ಣು ಹಾಗೂ ವಾಟರ್ ಆಪಲ್ ಸೇರಿದಂತೆ ಇತರೆ ಹಣ್ಣುಗಳು ನಳನಳಿಸುತ್ತಿವೆ. ಇದು ಸಾಧ್ಯವಾದದ್ದು ಸಾವಯುವ ಕೃಷಿ ಪದ್ದತಿಯಿಂದ ಸಾಧಿಸಿ ತೋ-ರಿಸಿದವರು ಇಂಡಿ ನಗರದ ರಾಜಶ್ರೀ ಅನಂತ ಜೈನ.

ಇಂಡಿ ನಗರದ ರಾಜಶ್ರೀಯವರು ಪತಿ ಅನಂತ ಅವರ ಸಹಾಯದಿಂದ 0.25 ಎಕರೆ ಅಂದರೆ ಒಂದು ನಾಲ್ಕನೆಯ ಅಂಶ ಎಕರೆ ಹೊಲದಲ್ಲಿ ವಿದೇಶಿ ಮಿಯಾಜೋಕಿ ಮಾವಿನ ಹಣ್ಣು , ಒಂದು ನಾಲ್ಕನೆಯ ಅಂಶ ಹೊಲದಲ್ಲಿ ವಿದೇಶಿ ಬನಾನಾ ಮಾವಿನ ಹಣ್ಣು, ಒಂದು ನಾಲ್ಕನೆಯ ಅಂಶ ಹೊಲದಲ್ಲಿ ವಿದೇಶಿ ವಾಟ-ರ್ ಆಪಲ್ ಸೇರಿದಂತೆ 40 ರೀತಿಯ ಹಣ್ಣುಗಳನ್ನು ಬೆಳೆಯುತ್ತಿದ್ದಾರೆ. ಅದರಲ್ಲಿ 10 ಮಾವಿನ ಹಣ್ಣು ಮತ್ತು ಎರಡು ಮಾವಿನಹಣ್ಣು ವಿದೇಶ ತಳಿಯಿಂದ ಕೂಡಿವೆ.

ದೇಶ ವಿದೇಶದ 40 ಕ್ಕೂ ಹೆಚ್ಚು ಬಗೆಯ ಹಣ್ಣಿನ ಗಿಡ ಬೆಳೆಸಿದ್ದು ಬಹುತೇಕ ಫಲ ನೀಡುತ್ತಿವೆ. ಮಿಯಾ



ಜೋಕಿ, ಬನಾನಾ ಮಾವಿನಹಣ್ಣು ವಾಟರ್ ಆಪಲ್ ಪ್ರತಿಯೊಂದು 25 ಕ್ಕೂ ಹೆಚ್ಚು ಹಣ್ಣಿನ ಗಿಡ ಬೆಳೆದಿದ್ದಾರೆ.

ಮಡ್ಡಿ ಹೊಲ ಏನೂ ಬೆಳೆಯುವದಿಲ್ಲ ಎಂದು ಸುಮಾರು 15 ವರ್ಷಗಳ ಕಾಲ ಮೆಕ್ಕೆಜೋಳ ಸಜ್ಜೆ ತೊಗರಿ ಬೆಳೆಯುತ್ತಿದ್ದರು. ಆಗ ಲಾಭವೆಂಬುದು ಮರಿಚೀಕೆಯಾಗಿತ್ತು. ಹೊಲದ ಸುತ್ತ ಮುಳ್ಳು ಕಂಠಿ ಬೆಳೆದಿದ್ದವು ಎಂದು ಅಂದಿನ ಸ್ಥಿತಿಯನ್ನು ವಿವರಿಸುತ್ತಾರೆ ರಾಜಶ್ರೀ.

ರಾಜಶ್ರೀ ವಿದ್ಯುತ್ ಉಪಕರಣ ತಯಾರಿಸುವ ಕಾರ್ಖಾನೆಯನ್ನು ಹೊಂದಿದ್ದು ಜೊತೆಗೆ ವೀರ ಭಾರತಿ ಶಿಕ್ಷಣ ಸಂಸ್ಥೆ ಅಧ್ಯಕ್ಷರಾಗಿ ಅವರ ಪತಿ ಅನಂತ ಜೈನ ಕೆಲಸ ಮಾಡುತ್ತಿದ್ದು ಹೊಲದ ಕಡೆಗೆ ಗಮನ ಹರಿಸುತ್ತಿರಲಿಲ್ಲ. ಹೀಗಾಗಿ 20 ವರ್ಷಗಳ ಹಿಂದೆ 10 ಎಕರೆ ಜಮೀನು ಖರಿದಿಸಿದ್ದು ಹೊಲದಲ್ಲಿ ಏನಾದರೂ ಸಾದಿಸಬೇಕೆಂಬ ಛಲ ಅವರದಾಗಿತ್ತು.

ಈ ಭೂಮಿಯಲ್ಲಿ ಮೆಕ್ಕೆಜೋಳ ತೊಗರಿ ಬಿಟ್ಟರೆ ಏನೂ ಬೆಳೆಯಲು ಸಾಧ್ಯವಿಲ್ಲ ಎಂದು ಆಲೋಚಿಸಿದ ರಾಜಶ್ರೀ ಬಂಜರು ಭೂಮಿಯಲ್ಲಿ ಏನಾದರೂ ಬೆಳೆದು ಫಸಲು ಪಡೆಯಬೇಕೆಂದು ನಿರ್ಧರಿಸಿದರು.

ಪತಿಯ ಸಹಾಯದಿಂದ ಮೊದಲು ಭೂಮಿಯಲ್ಲಿಯ ಮುಳ್ಳುಕಂಠಿ ಕಡಿಸಿ ಸಮತಟ್ಟಾಗಿ ಮಾಡಿಸಿದರು. ನೀರಿಗಾಗಿ ಐದು ಕೊಳವೆ ಬಾವಿ ಕೊರೆಸಿದರು. ಮತ್ತು ಎಲ್ಲ ಕಡೆಗೂ ಸೆಟಲಾಯಿಟ್ ಮೋಬೈಲ ಅಪರೇಟರ್ ನಿಂದ ನೀರು ಬಿಡುವ ವ್ಯವಸ್ಥೆಯಿಂದ ಮೊದಲು ತರಕಾರಿ ಬೆಳೆದರು. ಹೊಲದ ಬದುವಿಗೆ ಸ್ವದೇಶಿ ಹಾಗೂ ವಿದೇಶಿ ತಳಿಯ ಹಣ್ಣಿನ ಗಿಡ 20 ತೆಂಗಿನ ಗಿಡ ಬೆಳೆಸಿದರು. ಜೊತೆಗೆ ಏನಾದರೂ ಹೊಸ ಬೆಳೆ ಬೆಳೆಯಬೇಕೆಂದು ಮಾವಿನ ಹಣ್ಣು ಬೆಳೆದರು. ಆಂಧ್ರಪ್ರದೇಶದ ರಾಜಮಂಡಿಯಿಂದ ರೂ ಹತ್ತು ಸಾವಿರಕ್ಕೆ ಒಂದು ಅಗಿ ಮಿಯಾ ಜೋಕಿ ಮಾವಿನಹಣ್ಣು ಅಗಿ ತಂದು ವಿದೇಶಿ ಗಿಡ ಹಚ್ಚಿದರು. ಈಗ ಒಂದು ಗಿಡ 25 ರಿಂದ 30 ಹಣ್ಣು ನೀಡುತ್ತಿವೆ,. ಮೂರು ಅಥವಾ ನಾಲ್ಕು ಹಣ್ಣು ಸೇರಿ ಒಂದು ಕೆಜಿ ಆಗುತ್ತದೆ.

ಇವರ ಹೊಲಕ್ಕೆ ಭೇಟಿ ನೀಡಿದ ಸಹಾಯಕ ಕೃಷಿ ನಿರ್ದೇಶಕ ಮಹಾದೇವಪ್ಪ ಏವೂರ ಮತ್ತು ತೋಟಗಾ-ರಿಕೆ ಸಹಾಯಕ ನಿರ್ದೇಶಕ ಎಚ್.ಎಸ್. ಪಾಟೀಲ ಇವರು ಇಂಡಿಯಂತಹ ಪ್ರದೇಶದಲ್ಲೂ ಮಿಯಾಜೋಕಿ ಮಾವಿನಹಣ್ಣು ಬೆಳೆಯ ಬಹುದು ಎಂಬುದನ್ನು ರಾಜಶ್ರೀ ಮಹಿಳೆಯಾಗಿ ತೋರಿಸಿದ್ದಾರೆ ಎಂದು ಹೆಮ್ಮೆಯಿಂದ ಹೇಳುತ್ತಾರೆ.

### ಒಂದು ಕೆಜಿ ಮಾವಿಗೆ ಎರಡುವರೆ ಲಕ್ಷ ರೂ ಬೇಡಿಕೆ!

ಒಂದು ಮಾವಿನ ಗಿಡಕ್ಕೆ 25 ರಿಂದ 30 ಹಣ್ಣುಗಳು ಮತ್ತು ಮೂರು ಅಥವಾ ನಾಲ್ಕು ಹಣ್ಣು ಸೇರಿ ಒಂದು ಕೆಜಿ ಮಿಯಾಜೋಕಿ ಮಾವಿನಹಣ್ಣು ಆಗುತ್ತದೆ. ವಿದೇಶದಲ್ಲಿ ಒಂದು ಕೆಜಿಗೆ ಎರಡುವರೆ ಲಕ್ಷ ರೂ ಬೇಡಿಕೆ ಇದೆ. ಸಧ್ಯ ಒಂದು ಲಕ್ಷ ರೂ ಗೆ ಒಂದು ಕೆಜಿ ಹಣ್ಣು ಮಾರಾಟ ಮಾಡುತ್ತಿದ್ದಾರೆ. ಮುಂಬಯಿ ಕಲಕತ್ತಾ ಸೇರಿದಂತೆ ಹಲವಾರು ಕಡೆಗಳಿಂದ ದಲ್ಲಾಳಿಗಳು ಬಂದು ತೆಗೆದುಕೊಂಡು ಹೋಗುತ್ತಿದ್ದಾರೆ.



"ಬಂಜರು ಭೂಮಿ ಮುಳ್ಳು ಕಂಟಿಯಿಂದ ಕೂಡಿದ ಹೊಲದಲ್ಲಿ ಮಿಯಾಜೋಕಿ ವಿದೇಶಿ ಮಾವಿನಹಣ್ಣು ಬೆಳೆದು ಮಹಿಳೆ ಕೃಷಿ ತೋಟಗಾರಿಕೆಯಲ್ಲೂ ಸಾಧಿಸಿ ತೋರಿಸಬಹುದೆಂದು ರಾಜಶ್ರೀ ಯವರು ತೋರಿಸಿದ್ದಾರೆ. ಅವರ ಸಾಧನೆ ತೋಟಗಾರಿಕೆಗೆ ಹೆಮ್ಮೆ ಇದೆ."

■ ಎಚ್.ಎಸ್.ಪಾಟೀಲ ಸಹಾಯಕ ನಿರ್ದೇಶಕರು, ತೋಟಗಾರಿಕೆ ಇಲಾಖೆ, ಇಂಡಿ

**ವಿಜಯಪುರ ಜಿಲ್ಲೆಯಲ್ಲಿ ವಿದೇಶಿ ಮಾವಿನಹಣ್ಣು ಬೆಳೆದು ಯಶಸ್ವಿಯಾದ ಪ್ರಥ-ಮ ಮಹಿಳೆ । 1 ಕೆಜಿ ಮಿಯಾ ಜೋಕಿ ಮಾವಿಗೆ ರೂ.2.5 ಲಕ್ಷ ರೂ ಬೇಡಿಕೆ!**

"ವಿಜಯಪುರ ಜಿಲ್ಲೆಯಲ್ಲಿ ವಿದೇಶಿ ಮಾವಿನಹಣ್ಣು ಬೆಳೆದು ಯಶಸ್ವಿಯಾದ ಪ್ರಥಮ ಮಹಿಳೆ. ವಿಜಯಪುರದಲ್ಲಿಯೂ ಮಿಯಾಜೋಕಿ ಹಣ್ಣು ಬೆಳೆಯಬಹುದೆಂದು ರಾಜಶ್ರೀ ತೋರಿಸಿಕೊಟ್ಟಿದ್ದಾರೆ."

■ ಮಹಾದೇವಪ್ಪ ಏವೂರ ಸಹಾಯಕ ನಿರ್ದೇಶಕರು, ಕೃಷಿ ಇಲಾಖೆ ಇಂಡಿ

## ಹೆಲ್ಮೆಟ್ ಕಡ್ಡಾಯ ಸರಿ, ಕಲಬುರಗಿಯ ರಸ್ತೆ ಗುಂಡಿಗಳ ಕಥೆಯೇನು?



ಕಲಬುರ್ಗಿ: ನಗರದ ಸಂಚಾರ ವ್ಯವಸ್ಥೆಯಲ್ಲಿ ಹೆಲ್ಮೆಟ್ ಧರಿಸದಿದ್ದರೆ ದಂಡ ವಿಧಿಸುವ ಪೊಲೀಸ್ ಇಲಾಖೆ ಹಾಗೂ ಆಡಳಿತ ವ್ಯವಸ್ಥೆ, ವಾಹನ ಸವಾರರ ಪ್ರಾಣಕ್ಕೆ ಸಂಚಕಾರ ತರುತ್ತಿರುವ ಬೃಹತ್ ರಸ್ತೆ ಗುಂಡಿಗಳ ಬಗ್ಗೆ ಮಾತ್ರ ಕುರುಡುತನ ಪ್ರದರ್ಶಿಸುತ್ತಿದೆ. "ಹೆಲ್ಮೆಟ್ ಹಾಕಿರಿ.. ಇಲ್ಲವೇ ಕೈ ಕಾಲು ಮುರಿದುಕೊಳ್ಳಿರಿ" ಎನ್ನುವಂತಹ ದುಸ್ಥಿತಿ ನಗರದ ರಸ್ತೆಗಳಲ್ಲಿ ನಿರ್ಮಾಣವಾಗಿದೆ.

ಸಮಸ್ಯೆಯ ಕೇಂದ್ರಬಿಂದು: ಸರ್ದಾರ್ ಪಟೇಲ್ ವೃತ್ತದಿಂದ ಮಾರ್ಕೆಟ್ ರಸ್ತೆ ನಗರದ ಅತ್ಯಂತ ಜನನಿಬಿಡ ಪ್ರದೇಶವಾದ ಸರ್ದಾರ್ ಪಟೇಲ್ ವೃತ್ತದಿಂದ ಮಾರ್ಕೆಟ್ ಕಡೆಗೆ ಹೋಗುವ ರಸ್ತೆಯಲ್ಲಿ ಬೃಹತ್ ಗುಂಡಿಗಳು ಕಾಣಿಸಿಕೊಂಡಿವೆ. ಪಕ್ಕದಲ್ಲೇ ನಗರ ಬಸ್ ನಿಲ್ದಾಣ, ಹೆಸರಾಂತ ಬ್ಯಾಂಕ್‌ಗಳು ಹಾಗೂ ಕನ್ನಡ ಭವನ ಇರುವ ಈ ರಸ್ತೆಯಲ್ಲಿ ಪ್ರತಿದಿನ ಸಾವಿರಾರು ಜನರು ಸಂಚ-ರಿಸುತ್ತಾರೆ. ಇತ್ತೀಚೆಗೆ ನಡೆದ ಡ್ರೈನೇಜ್ ಕೆಲಸದ ನಂತರ ರಸ್ತೆಯನ್ನು ಸರಿಯಾಗಿ ದುರಸ್ತಿ ಮಾಡದೆ ಹಾಗೆಯೇ ಬಿಟ್ಟಿರುವುದು ಸಾರ್ವಜನಿಕರ ಆಕ್ರೋಶಕ್ಕೆ ಕಾರಣವಾಗಿದೆ.

ಕೇವಲ ಈ ಒಂದು ರಸ್ತೆ ಮಾತ್ರವಲ್ಲದೆ, ನಗರದ ಪ್ರಮುಖ ಕೇಂದ್ರಗಳು ಗುಂಡಿಮಯವಾಗಿವೆ.

ಜಿಲ್ಲೆಯ ಉನ್ನತ ಅಧಿಕಾರಿಗಳ ಕಚೇರಿ ಇರುವ ಡಿಸಿ ಕಚೇರಿ ಹಿಂಭಾಗ ಪ್ರದೇಶದಲ್ಲೇ ರಸ್ತೆ ಪರಿಸ್ಥಿತಿ ಚಿಂತಾಜನಕವಾಗಿದೆ.ಮಿನಿ ವಿಧಾನ ಸೌಧದ ಮುಖ್ಯ ದ್ವಾರದ ರಸ್ತೆಯೂ ಸಹ ಇಂತಹದ್ದೇ ಅವ್ಯವಸ್ಥೆಗೆ ಬಲಿಯಾಗುವ ಸಾಧ್ಯತೆ ದಟ್ಟವಾಗಿದೆ.ಸರಸ್ವತಿ ಗೋದಾಮು ಹಾಗೂ ಸಿಖ್ ಗುರುದ್ವಾರ ಭಾಗದ ರಸ್ತೆಗಳೂ ಸವಾರರಿಗೆ ಹಗಲುಗನಸಿನಂತೆ ಕಾಡುತ್ತಿವೆ.

ಸಾರ್ವಜನಿಕರ ಪ್ರಶ್ನೆ: "ಪೊಲೀಸ್ ಇಲಾಖೆ ಹೆಲ್ಮೆಟ್ ವಿಷಯದಲ್ಲಿ ತೋರಿಸುವ ಗಂಭೀರತೆಯನ್ನು ರಸ್ತೆಗಳ ದುರಸ್ತಿ ವಿಷಯದಲ್ಲಿ ಏಕೆ ತೋರಿಸುತ್ತಿಲ್ಲ? ಗುಂಡಿ ತಪ್ಪಿಸಲು ಹೋಗಿ ಬಿದ್ದು ಪ್ರಾಣ ಕಳೆದುಕೊಂಡರೆ ಹೊಣೆ ಯಾರು?" ಎಂದು ಸಾರ್ವಜನಿಕರು ಪ್ರಶ್ನಿಸುತ್ತಿದ್ದಾರೆ.

ಮನವಿ: ಸಂಬಂಧಪಟ್ಟ ಮಹಾನಗರ ಪಾಲಿಕೆ ಹಾಗೂ ಲೋಕೋಪಯೋಗಿ ಇಲಾಖೆ ಕೂಡಲೇ ಎಚ್ಚೆತ್ತುಕೊಂಡು, ಮಿನಿ ವಿಧಾನ ಸೌಧ ಹಾಗೂ ಡಿಸಿ ಕಚೇರಿಯಂತಹ ಪ್ರಮುಖ ರಸ್ತೆಗಳ ಗುಂಡಿಗಳನ್ನು ಮುಚ್ಚಿ ಸುಗಮ ಸಂಚಾರಕ್ಕೆ ಅನುವು ಮಾಡಿಕೊಡಬೇಕಿದೆ. ಅನಾಹುತಗಳು ಸಂಭವಿಸುವ ಮುನ್ನವೇ ಎಚ್ಚೆತ್ತುಕೊಳ್ಳುವುದು ಆಡಳಿತದ ಆದ್ಯ ಕರ್ತವ್ಯವಾಗಿದೆ.

## ಮಾಜಿ ಉಪ ಪ್ರಧಾನಿ ಬಾಬು ಜಗಜೀವನ ರಾಮ್ ಜಯಂತೋತ್ಸವ: ಭವ್ಯ ಮೆರವಣಿಗೆಗೆ ಎಸಿ ಪ್ರಭುರೆಡ್ಡಿ ಚಾಲನೆ



ಸೇಡಂ:ತಾಲೂಕಾ ಆಡಳಿತ ವತಿಯಿಂದ ಸ್ವಾತಂತ್ರ ಹೋರಾಟಗಾರರು ಹಸಿರು ಕ್ರಾಂತಿಯ ಹರಿಕಾರ ಹಾಗೂ ಭಾರತದ ಉಪ ಪ್ರಧಾನಿಗಳಾದ ಬಾಬು ಜಗಜೀವನ್ ಜಯಂತೋತ್ಸವ ಅಂಗವಾಗಿ ಸಹಾಯಕ ಆಯುಕ್ತರಾದ ಪ್ರಭುರೆಡ್ಡಿ ರವರು ಬಾಬುಜಿ ಭಾವಚಿತ್ರಕ್ಕೆ ಪೂಜೆ ಪುಷ್ಪ ನಮನ ಸಲ್ಲಿಸಿ ಭವ್ಯ ಮೆರವಣಿಗೆಗೆ ಶ್ರೀ ಕೊತ್ತಲ ಬಸವೇಶ್ವರ ದೇವಸ್ಥಾನದಿಂದ ಸರ್ಕಾರಿ ನೌಕರರ ಭವನದ ವರೆಗೆ ಚಾಲನೆ ನೀಡಿದರು. ಈ ವೇಳೆಯಲ್ಲಿ ಸಹಾಯಕ ಆಯುಕ್ತರಾದ ಪ್ರಭುರೆಡ್ಡಿ, ತಹಸಿಲ್ದಾರ್ ಶ್ರೀಮತಿ ಶ್ರೀಯಾಂಕ್ ಎ ಧನಶ್ರೀ, ಸಮಾಜ ಕಲ್ಯಾಣ ಇಲಾಖೆ ಸಹಾಯಕ ನಿರ್ದೇಶಕ ವಿಜಯಕುಮಾರ್ ಪುಲಾರಿ, ಅಕ್ಷರ ದಾಸೋಹ ಸಹಾಯಕ ನಿರ್ದೇಶಕರಾದ ಉಮಾಪತಿ ರಾಜು,ನಗರಸಭೆ ಮುಖ್ಯಾಧಿಕಾರಿ ಶರಣಯ್ಯ ಸ್ವಾಮಿ, ತಾಪಂ ಇಓ ಚನ್ನಪ್ಪ ರಾಯಣ್ಣನವರ, ಕ್ಷೇತ್ರ ಶಿಕ್ಷಣಾಧಿಕಾರಿ ಮಾರುತಿ ಹುಜುರಾತಿ, ಪಶು ಸಂಗೋಪನಾ ಇಲಾಖೆ ಸಹಾಯಕ ನಿರ್ದೇಶಕರಾದ ಡಾ.ಇಮ್ರಾನ್ ಮನಿಯಾರ, ಶಿಶು ಅಭಿವೃದ್ಧಿ ಯೋಜನಾಧಿಕಾರಿ ಶ್ರೀಮತಿ ಅನುರಾಧ ಪಾಟೀಲ್, ಶಿವಯೋಗಿ ಸಕ್ಪಾಲ, ರಾಜಶೇಖರ್ ರುದನುರ, ಶ್ರೀಶೈಲ ಎಮ್ ಜಿ, ಜಗನ್ನಾಥ ಚಿಂತಪಳ್ಳಿ, ಶಿವಪುತ್ರಪ್ಪ ಮೊಘ, ರಾಮು ಕಾಣೇಕಲ್, ಹಣಮಂತ ಭರತನೂರ, ಜಗನ್ನಾಥ ಕುಕ್ಕುಂದಾ, ಸೇರಿದಂತೆ ಅನೇಕರು ಉಪಸ್ಥಿತರಿದ್ದರು

## ಬರದ ನಾಡಿನ ಹಸಿರುಕ್ರಾಂತಿಯ ಹರಿಕಾರ ಡಾ.ಬಾಬು ಜಗಜೀವನರಾಮ್

ಕಲಬುರಗಿ,ಏ 5: ಭಾರತದ ಮಾಜಿ ಉಪಪ್ರಧಾನಿ, ಕೃಷಿ, ಕಾರ್ಮಿಕ, ರೈಲ್ವೆ, ದೂರ ಸಂಪರ್ಕ, ರಕ್ಷಣೆ ಸೇ-ರಿದಂತೆ ಹಲವು ಪ್ರಮುಖ ಖಾತೆಗಳನ್ನು ನಿರ್ವಹಿಸಿದ ಡಾ.ಬಾಬು ಜಗಜೀವನರಾಮ್ ಅವರು ಬರದ ನಾಡಾಗಿದ್ದ ಭಾರತದಲ್ಲಿ ಕೃಷಿ ಇಳುವರಿ ಹೆಚ್ಚಿಸಲು ಕೈಗೊಂಡ ಕ್ರಮಗಳಿಂದಾಗಿ ಪರಿಣಾಮಕಾರಿ ಹಸಿರು ಕ್ರಾಂತಿ ನೆರವೇ-ರಿಸಿದರು ಎಂದು ಶಾಸಕ ಅಲ್ಲಮಪ್ರಭು ಪಾಟೀಲ ಅವರು ಅಭಿಪ್ರಾಯಪಟ್ಟರು.

ಡಾ. ಬಾಬು ಜಗಜೀವನರಾಮ್ ಜಿಲ್ಲಾ ಜಯಂತ್ಯುತ್ಸವ ಸಮಿತಿಯು ನಗರದ ಜಗಜೀವನರಾಮ್ ಅವರ ಪ್ರತಿಮೆ ಆವರಣದಲ್ಲಿ ಶನಿವಾರ ಅಯೋಜಿಸಿದ್ದ ಬಹಿರಂಗ ಸಭೆಯಲ್ಲಿ ಅವರು ಮಾತನಾಡಿದರು.

ತೀವ್ರವಾದ ಬರಗಾಲದಿಂದಾಗಿ ಭಾರತದಲ್ಲಿ ಧಾನ್ಯಗಳ ಉತ್ಪನ್ನ ಕಡಿಮೆಯಾಗಿತ್ತು. ಹೀಗಾಗಿ, ಅಂದಿನ ಪ್ರಧಾನಿ ವಿದೇಶಗಳಿಗೆ ಹೋದಾಗ ಭಿಕ್ಷುಕರ ಪ್ರಧಾನಿ ಬಂದರು ಎಂದು ಅಲ್ಲಿನವರು ಹೀಯಾಳಿಸುತ್ತಿದ್ದರು.



ಇದನ್ನು ಗಂಭೀರವಾಗಿ ಪರಿಗಣಿಸಿದ ಅಂದಿನ ಪ್ರಧಾನಿ ಇಂದಿರಾಗಾಂಧಿ ಅವರು ದೇಶದಲ್ಲಿನ ಕೃಷಿ ಉತ್ಪಾದನೆ ಹೆಚ್ಚಿಸುವಂತೆ ಕೃಷಿ ಸಚಿವರಾಗಿದ್ದ ಜಗಜೀವನರಾಮ್ ಅವರಿಗೆ ಸೂಚನೆ ನೀಡಿದ್ದರು. ಅದರಂತೆ ಭಾಕ್ರಾನಂಗಲ್ ಅಣೆಕಟ್ಟು ನಿರ್ಮಿಸಿ ನೀರಾವರಿ ಕಲ್ಪಿಸಿದರು. ರಸಗೊಬ್ಬರ ಕಾರ್ಖಾನೆಗಳನ್ನು ಆರಂಭಿಸಿ ಬೆಳೆಯ ಇಳುವರಿಯನ್ನು ಹೆಚ್ಚಿಸುವ ಅತ್ಯಾಧುನಿಕ ಕ್ರಮಗಳನ್ನು ಕೈಗೊಳ್ಳಲಾಯಿತು ಎಂದರು

ಸಭೆಯಲ್ಲಿ ಪ್ರಧಾನ ಭಾಷಣ ಮಾಡಿದ ಪ್ರಾಂಶುಪಾಲ ಮಲ್ಲಿಕಾರ್ಜುನ ಸಾವರಕರ್ ಅವರು ಸ್ವಾತಂತ್ರ್ಯ ಪೂರ್ವದಲ್ಲಿಯೇ ರಚನೆಯಾದ ಮಧ್ಯಂತರ ಸರಕಾರದಲ್ಲಿ ಬಾಬೂಜಿ ಅವರು ಕಾರ್ಮಿಕ ಖಾತೆಯನ್ನು ನಿರ್ವಹಿಸಿದ್ದರು.

ಆಗಲೇ ಕಾರ್ಮಿಕರಿಗೆ ಕನಿಷ್ಠ ವೇತನ ಸೇರಿದಂತೆ ವಿವಿಧ ಕಾರ್ಮಿಕ ಪರ 12ಕ್ಕೂ ಅಧಿಕ ಕಾಯಿದೆಗಳನ್ನು ರೂಪಿಸಿದ್ದರು. ದೂರಸಂಪರ್ಕ ಖಾತೆ ಸಚಿವರಾಗಿದ್ದಾಗ ಎರಡು ಗ್ರಾಮಗಳಿಗೆ ಒಂದರಂತೆ ಅಂಚೆ ಕಚೇರಿಗಳನ್ನು ತೆರೆದರು ಎಂದರು.

ನಿರಗುಡಿಯ ಹವಾ ಮಲ್ಲಿನಾಥ ಮಹಾರಾಜರು ಸಮಾರಂಭದ ಸಾನ್ನಿಧ್ಯ ವಹಿಸಿದ್ದರು. ಶರಣಬಸವೇಶ್ವರ ವಿದ್ಯಾವರ್ಧಕ ಸಂಘದ ಕಾರ್ಯದರ್ಶಿ ಬಸವರಾಜ ದೇಶಮುಖ, ಮಾಜಿ ಸಚಿವ ಮಾಲೀಕಯ್ಯ ಗುತ್ತೇದಾರ,ಮಾಜಿ ಶಾಸಕ ದತ್ತಾತ್ರೇಯ ಪಾಟೀಲ ರೇವೂರ, ಜೆಸ್ಕಾಂ ಅಧ್ಯಕ್ಷ ಪ್ರವೀಣ ಪಾಟೀಲ ಹರವಾಳ,ಕಾಂಗ್ರೆಸ್ ಮುಖಂಡ ನೀಲಕಂಠರಾವ್ ಮೂಲಗೆ, ಜಿಲ್ಲಾ ಜಯಂತ್ಯುತ್ಸವ ಸಮಿತಿ ಗೌರವಾಧ್ಯಕ್ಷ ವಿಜಯಕುಮಾರ ರಾಮಕೃಷ್ಣ,ಸಮಿತಿ ಅಧ್ಯಕ್ಷ ಮಲ್ಲಿಕಾರ್ಜುನ ದೊಡ್ಡಮನಿ,ಕಾರ್ಯಾಧ್ಯಕ್ಷ ಶರಣು ಸಗರಕರ್, ಪ್ರಚಾರ ಸಮಿತಿ ಅಧ್ಯಕ್ಷ ಸತೀಶ ಅಳೋಳ್ಳಿ,ಕಾರ್ಯಾಧ್ಯಕ್ಷ ಪ್ರದೀಪ ಬಾಚನಳ್ಳಿ,ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿ ಅಧ್ಯಕ್ಷೆ ಚಂದ್ರಿಕಾ ಪರಮೇಶ್ವರ,ಮಹಾನಗರ ಪಾಲಿಕೆ ಸದಸ್ಯೆ ನಿಂಗಮ್ಮ ಕಟ್ಟಿಮನಿ,ಮುಖಂಡರಾದ ರಾಜು ವಾಡೇಕರ್, ಗೀತಾ ವಾಡೇಕರ್ , ಲಿಂಗರಾಜ ತಾರಫೈಲ್,

## ಮಹಿಳಾ ಸಬಲೀಕರಣ ಪ್ರಕ್ರಿಯೆಯಲ್ಲಿ ಕಲಬುರಗಿ ಮಹಿಳೆಯರು ಎತ್ತಿದ ಕೈ:ಫೌಜಿಯಾ ತರನ್ನುಮ

ಕಲಬುರಗಿ:ಮಹಿಳಾ ಸಬಲೀಕರಣವು ಆರ್ಥಿಕ, ಸಾಮಾಜಿಕ, ರಾಜಕೀಯ ಮಹಿಳೆಯರಿಗೆ ಸಮಾನ ಅವಕಾಶ, ನಿರ್ಧಾರ ತೆಗೆದುಕೊಳ್ಳುವ ಶಕ್ತಿ ಮತ್ತು ಹಕ್ಕುಗಳನ್ನು ಒದಗಿಸುವ ಪ್ರಕ್ರಿಯೆಯಲ್ಲಿ ಕಲಬುರಗಿ ಜಿಲ್ಲೆಯಲ್ಲಿ ಮಹಿಳೆಯರು ಮುಂದೆ ಇದ್ದಾರೆ ಎಂದು ಹೇಳಲು ಹೆಮ್ಮೆ ಅನಿಸುತ್ತದೆ. ಜಿಲ್ಲೆಯ ಅನೇಕ ಮಹೀಳಾ ಸಂಘಟನೆಗಳು ಕ್ರೀಯಾಶಿಲರಾಗಿ ಚಟುವಟಿಕೆಯಲ್ಲಿ ತೊಡಗಿಸಿಕೊಂಡಿದ್ದಾರೆ ಎನ್ನುವುದಕ್ಕೆ ವಾರದಲ್ಲಿ ಎರಡು ಮೂರು ಮಹಿಳಾ ಸಂಘಟನೆಗಳು ಮಹಿಳಾ ಸಬಲೀಕರಣ ಮತ್ತು ಸಂಘಟನೆಯ ಕುರಿತು ಆಮಂತ್ರಣ ಪತ್ರ ಪತ್ರಿಕೆ ಕೊಡುತ್ತಿದ್ದಾರೆ ಎನ್ನುತ್ತಾ ಜಿಲ್ಲಾಧಿಕಾರಿಯಾಗಿ ಇಡೀ ಜಿಲ್ಲೆಯ ಆಡಳಿತ ನಡೆಸುತ್ತಿರುವ ಮಹಿಳೆ ನಾನೇ ಇದಕ್ಕೆ ಉದಾಹರಣೆ ಎನ್ನುತ್ತಾ ತಾವು ಕೂಡಾ ತಮ್ಮ ಹೆಣ್ಣು ಮಕ್ಕಳಿಗೆ ಉತ್ತಮ್ಮ ಶಿಕ್ಷಣ ನೀಡಲು ಮುಂದಾಗಿ ಎಂದು ಕಾರ್ಯಕ್ರಮ ಉದ್ಘಾಟಿಸಿದ ಜಿಲ್ಲಾಧಿಕಾರಿ ಫೌಜಿಯ ತರನ್ನುಮ್ ಮಾತನಾಡಿದರು.

ಏಪ್ರೀಲ್ 02 ರಂದು ವಿದ್ಯಾನಗರದ ಅಕ್ಕಮಹಾದೇವಿ ಮಹಿಳಾ ಟ್ರಸ್ಟ್ ಹಾಗೂ ವಿದ್ಯಾ ನಗರ ವೇಲ್‌ಫೇರ್ ಸೋಸೈಟಿ ಸಂಯುಕ್ತ ಆಶ್ರಯದಲ್ಲಿ ಹಮ್ಮಿಕೊಂಡ ಅಕ್ಕಮಹಾದೇವಿ ಜಯಂತಿ, ಉಪನ್ಯಾಸ ಮತ್ತು ಸತ್ಕಾರ ಸಮಾರಂಭ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು.

ಅಕ್ಕಮಹಾದೇವಿಯರವರು ತಮ್ಮ ಜೀವನದಲ್ಲಿ ಎದುರಿಸಿಸದ ಕಷ್ಟ ಸಮಸ್ಯೆ ಅನುಭವದಿಂದಲೇ ವಚನಗಳು ಬರೆದು ಕನ್ನಡ ಸಾಹಿತ್ಯಾ ಲೋಕ ಶ್ರೀಮಂತಗೊಳ್ಳಿಸಿದ್ದಾರೆ ಎನ್ನುತ್ತಾ ಅನೇಕ ಅಕ್ಕನ ವಚನ ವಿಶ್ಲೇಷಗಳೊಂದಿಗೆ



ಅಕ್ಕಮಹಾದೇವಿಯವರ ಜೀವನ ಚರಿತ್ರೆಯ ಕುರಿತು ಡಾ.ಶಿವಲೀಲಾ ಚಟ್ನಳ್ಳಿ ಅವರು ಉಪನ್ಯಾಸ ನೀಡಿದರು.

ಅಕ್ಕಮಹಾದೇವಿಯರವರು 12ನೇ ಶತಮಾನದಲ್ಲಿಯೇ ಕವಿಯಾಗಿ ಸಮಸ್ತ ಮಹಿಳಾ ಲೋಕಕ್ಕೆ ಆದರ್ಶ ಪ್ರೇಯರಾಗಿದ್ದಾರೆ ಎಂದು ಡಾ.ಕದಳಿ ಆಸ್ಪತ್ರೆಯ ನಿರ್ದೇಶಕರಾದ ಡಾ.ಭಾಗ್ಯಶ್ರೀ ಶರಣಪ್ರಕಾಶ ಪಾಟೀಲ ಸನ್ಮಾನ ಸ್ವೀಕರಿಸಿ ಮಾತನಾಡಿದರು.

ಉಮೇಶ ಶೆಟ್ಟಿಯವರು ಸನ್ಮಾನ ಸ್ವೀಕರಿಸಿ ಅಕ್ಕನ ವಚನ ಹಾಡಿದರು. ಕಾರ್ಯಕ್ರಮ ಅಧ್ಯಕ್ಷತೆ ವಹಿಸಿದ ಅಕ್ಕಮಹಾದೇವಿ ಮಹಿಳಾ ಟ್ರಸ್ಟಿನ ಅಧ್ಯಕ್ಷ ರತ್ನಮ್ಮ ನಿಂಬೂರ ಅವರು 11ನೇ ವಾರ್ಷಿಕೋತ್ಸವದ ನಿಮಿತ್ಯ ಸಂಘದ 11 ಚಟುವಟಿಕೆಯ ಕುರಿತು ಮಾತನಾಡಿದರು. ಇದೇ ಸಂದರ್ಭದಲ್ಲಿ ವಿವಿಧ ಬಡಾವಣೆಯ ಮಹಿಳಾ ಸಂಘಟನೆಯ ಮುಖ್ಯಸ್ಥರಿಗೆ ಸನ್ಮಾನಿಸಿ ಗೌರವಿಸಲಾಯಿತು. ಭಾರತಿ ಬಿರಾದಾರ (ಪ್ರಗತಿ ಕಾಲೋನಿ), ಲಕ್ಷ್ಮಿ ಕುಂಬಾರ (ಬಡೆಪೂರ ಕಾಲೋನಿ), ಶೈಲಾಜ ವಾಲಿ, ಅನುರಾಧ ಕುಮಾರಸ್ವಾಮಿ (ಜಯ ನಗರ), ಕಮಲಾಬಾಯಿ ಗೌಡತಿ (ಸ್ವಸ್ತಿಕ ನಗರ)

ರೇಖಾ ಅಂಡಗಿ ಪ್ರಾರ್ಥಿಸಿದರು, ಸುರೇಖಾ ಯಾದಗಿರ ಸ್ವಾಗತಿಸಿದರು, ತಾರಾ ಪಾಟೀಲ ವಂದಿಸಿದರು. ಡಾ. ಅನುರೀತಾ ಹಿಂದೊಡ್ಡಿ, ದೇವಿಕಾ ತಂಬಾಕೆ, ಮಧು ಹಿಂದೊಡ್ಡಿ, ನಿರೂಪಿಸಿ ನಿರ್ವಹಣೆ ಮಾಡಿದರು.

## ಆರ್.ಜೆ. ಕಾಲೇಜಿನಲ್ಲಿ ಶೈಕ್ಷಣಿಕ ಪರೀಕ್ಷಾ ಹಬ್ಬ

ಕಲಬುರಗಿ: ನಗರದ ಪ್ರತಿಷ್ಠಿತ ವಿದ್ಯಾಸಂಸ್ಥೆಗಳಲ್ಲಿ ಒಂದಾದ ಸರದಾರ ವಲ್ಲಭಭಾಯಿ ಪಟೇಲ್ ಸಂಚಾಲಿತ ರಮಾಬಾಯಿ ಜಹಾಗೀರದಾರ (ಆರ್.ಜೆ) ಸ್ವತಂತ್ರ ಪದವಿ ಪೂರ್ವ ವಿಜ್ಞಾನ ಕಾಲೇಜಿನಲ್ಲಿ ಪ್ರಥಮ ಪಿಯುಸಿಗೆ ಪ್ರವೇಶಾತಿ ಬಯಸಿ ಪರೀಕ್ಷೆ ಬರೆಯಲು 10ನೇ ತರಗತಿಯ ಸರಿಸುಮಾರು ಐದುನೂರು ವಿದ್ಯಾರ್ಥಿಗಳು ಆಗಮಿಸಿ ಉತ್ಸಾಹದಿಂದ ಪರೀಕ್ಷೆ ಬರೆದು ಖುಷಿ ಪಟ್ಟರು. ವಿದ್ಯಾರ್ಥಿಗಳು ಸರದಿ ಸಾಲಿನಲ್ಲಿ ಶಿಸ್ತುಬದ್ಧವಾಗಿ ಕೊಠಡಿಗಳಿಗೆ ತೆರಳಿ, ಮದ್ಯಾಹ್ನ 2 ರಿಂದ 4ರ ವರೆಗೆ ಪರೀಕ್ಷೆ ಬರೆದ ವಿದ್ಯಾರ್ಥಿಗಳಿಗೆ ವಿಜ್ಞಾನ ವಿಭಾಗದ ಫಾರ್ಮುಲಾ ಪುಸ್ತಕಗಳನ್ನು ವಿತರಿಸಲಾಯಿತು.

ಕಾಲೇಜಿನ ಆವರಣದಲ್ಲಿ ಹಬ್ಬದ ವಾತಾವರಣ ಸೃಷ್ಠಿಯಾಗಿತ್ತು. ಮಕ್ಕಳಿಗೆ ಹಾಗೂ ಜೊತೆಗೆ ಬಂದ ಪಾಲಕರಿಗೆ ಪರೀಕ್ಷೆ, ಪ್ರವೇಶಾತಿ, ಉತ್ತಮ ಭೋದನಾ ಕ್ರಮ, ಸುಸಜ್ಜಿತ ಪ್ರಯೋಗಾಲಯಗಳು, ಗ್ರಂಥಾಲಯ, ಭೋದನಾ ಕೊಠಡಿಗಳು, ಹಾಗೂ ಕಾಲೇಜಿನ ನುರಿತ ಉಪನ್ಯಾಸಕರಿಂದ ಸ್ಪರ್ಧಾತ್ಮಕ ಪರೀಕ್ಷೆಗಳಾದ ಓಇಇಖ, ಎಇಇ ಮತ್ತು ಏಅಇಖ ತರಬೇತಿ ಹಾಗೂ ಅದರ ಅಭ್ಯಾಸ ಪುಸ್ತಕ ರಚಿಸಿದ ಬಗ್ಗೆ ವಿವರವಾಗಿ ಮಾಹಿತಿಯನ್ನು ನೀಡಿದರು. ಅದೇರೀತಿಯಾಗಿ ಕಳೆದ ಸಾಲಿನಲ್ಲಿ ಆರ್. ಜೆ. ಕಾಲೇಜಿನ ಫಲಿತಾಂಶ 100% ಬಂದಿರುವುದು ವಿದ್ಯಾರ್ಥಿಗಳ ಸಾಧನೆಗೆ ನುರಿತ ಉಪನ್ಯಾಸಕರ ಕಾರ್ಯ ಶ್ಲಾಘನೀಯವಾದದ್ದು ಎಂದು ಪ್ರಾಚಾರ್ಯರು ಹೇಳಿದರು.

ಈ ಪರೀಕ್ಷೆಯ ಕಾರ್ಯದಲ್ಲಿ ಕಾಲೇಜಿನ ಉಪನ್ಯಾಸಕ ಹಾಗೂ ಸಿಬ್ಬಂದಿ ಬಳಗ ಉತ್ತಮ ವ್ಯವಸ್ಥೆಯನ್ನು ನೀಡಿದರು. ಪಾಲಕರಿಗೆ ಮತ್ತು ವಿದ್ಯಾರ್ಥಿಗಳಿಗೆ ತಂಪಾದ ಮಜ್ಜಿಗೆ ವ್ಯವಸ್ಥೆಯನ್ನು ಮಾಡಲಾಯಿತು.

ಆರ್.ಜೆ. ಪಿಯು ಕಾಲೇಜಿನಲ್ಲಿ ಪ್ರಥಮ ಪಿಯುಸಿ ಪ್ರವೇಶ ಪರೀಕ್ಷೆಗೆ ನಾನು ಬಂದಿದ್ದು, ಡಾ. ಭುರ್ಲಿ ಪ್ರಹ್ಲಾದ ಸರ್ ಅವರು ಶಿಸ್ತಿನ ಸಿಪಾಯಿಯಾಗಿದ್ದು, ಒಳ್ಳೆಯ ಆಡಳಿತಗಾರರಾಗಿದ್ದು, ಮಕ್ಕಳಿಗೆ ಒಳ್ಳೆಯ ಮಾರ್ಗದರ್ಶನ ನೀಡುತ್ತಾರೆ. ನಾನು ಕೂಡ ಇದೇ ಕಾಲೇಜಿನಲ್ಲಿ ಓದಬೇಕೆಂಬ ಆಕಾಂಕ್ಷೆ ಇಟ್ಟುಕೊಂಡು ಪರೀಕ್ಷೆ ಬರೆದಿದ್ದೇನೆ. ಇಲ್ಲಿನ ವಾತಾವರಣ ಶಿಸ್ತಿನ ವ್ಯವಸ್ಥೆ ಕಂಡು ಖುಷಿ ಪಟ್ಟಿದ್ದೇನೆ. ಇದೇ ಕಾಲೇಜಿನಲ್ಲಿ ಪ್ರವೇಶಾತಿಗೆ ಇಚ್ಚಿಸುತ್ತೇನೆ.

ತಂಪಾದ ಮಜ್ಜಿಗೆಯನ್ನು ಕುಡಿದು ನಮ್ಮ ಗೆಳೆಯರೆಲ್ಲರು ಸಂಭ್ರಮಿಸಿದೆವು.

# ಏ.11 ರಂದು ರಾಷ್ಟ್ರಮಟ್ಟದ ವಿಚಾರ ಸಂಕಿರಣ ಅನುಸಂಧಾನ–11

■ ಉದಯರಶ್ಮಿ ದಿನಪತ್ರಿಕೆ

ವಿಜಯಪುರ: ಬಿ. ಎಲ್. ಡಿ. ಇ ಸಂಸ್ಥೆಯ ಎ. ವಿ. ಎಸ್ ಆಯುರ್ವೇದ ಮಹಾವಿದ್ಯಾಲಯ, ಆಸ್ಪತ್ರೆ ಮತ್ತು ಸಂಶೋಧನ ಕೇಂದ್ರ ವತಿಯಿಂದ ಏಪ್ರಿಲ್ 11 ಶನಿವಾರ ದಂದು ಒಂದು ದಿನದ ರಾಷ್ಟ್ರಮಟ್ಟದ ವಿಚಾರ ಸಂಕಿರರ್ಣ ಅನುಸಂಧಾನ–11 ನಡೆಯಲಿದೆ.

ಅಂದು ಬೆಳಿಗ್ಗೆ 9.30 ಗಂಟೆಗೆ ಬಿ. ಎಲ್. ಡಿ. ಇ ಸಂಸ್ಥೆಯ ವಚನಪಿತಾಮಹ ಡಾ.ಪಿ. ಜಿ. ಹಳಕಟ್ಟಿ ಎಂಜನಿಯರಿಂಗ್ ಕಾಲೇಜಿನ ಸಭಾಂಗಣದಲ್ಲಿ

ಬೆಂಗಳೂರಿನ ರಾಜೀವ ಗಾಂಧಿ ಆರೋಗ್ಯ ವಿಶ್ವವಿದ್ಯಾಲಯ ಬೆಂಗಳೂರು ಸಹಯೋಗದಲ್ಲಿ ಈ ಕಾರ್ಯಕ್ರಮ ನಡೆಯಲಿದೆ.

ಬಿ. ಎಲ್. ಡಿ. ಇ ಸಂಸ್ಥೆಯ ಪ್ರಧಾನ ಕಾರ್ಯದರ್ಶಿ ಮತ್ತು ವಿಧಾನ ಪರಿಷತ ಶಾಸಕ ಸುನೀಲಗೌಡ ಪಾಟೀಲ,ಬಿ.ಎಲ್.ಡಿ.ಇ ಡೀಮ್ಡ್ ವಿಶ್ವವಿದ್ಯಾಲಯ ಸಮಕುಲಾಧಿಪತಿ ಡಾ. ವೈ. ಎಂ. ಜಯರಾಜ, ರಜಿಸ್ಟ್ರಾರ್ ಡಾ. ರಾಘವೇಂದ್ರ ವಿ. ಕುಲಕರ್ಣಿ, ನವದೆಹಲಿಯ ಬೋರ್ಡ ಆಫ್ ಆಯುರ್ವೇದ ಎನ್. ಸಿ. ಐ. ಎಸ್. ಎಂ ಅಧ್ಯಕ್ಷ, ಡಾ. ಅಲ್ಲಮಪ್ರಭು ಗುಡ್ಡಾ, ಮಾಜಿ ಅಧ್ಯಕ್ಷ ಡಾ. ಬಿ. ಶ್ರೀನಿವಾಸ ಪ್ರಸಾದ ಮುಂತಾದವರು ಉಪಸ್ಥಿತ–ರಿರಲಿದ್ದಾರೆ. ರಾಜ್ಯದಿಂದ ನಾನಾ ಭಾಗಗಳಿಂದ ಅನುಭವಿ ಉಪನ್ಯಾಸಕರು ಸಂಶೋಧನ ಕುರಿತು ಪ್ರಬಂಧ ಮಂಡಿಸಲಿದ್ದಾರೆ.

ಈ ವಿಚಾರ ಸಂಕಿರಣದಲ್ಲಿ ರಾಜ್ಯದ ನಾನಾ ಭಾಗಗಳಿಂದ ಸುಮಾರು 400ಕ್ಕೂ ಹೆಚ್ಚು ಸ್ನಾತಕೋತ್ತರ ವೈದ್ಯ ವಿದ್ಯಾರ್ಥಿಗಳು ಭಾಗವಹಿಸಲಿದ್ದಾರೆ ಎಂದು ಮಹಾವಿದ್ಯಾಲಯದ ಪ್ರಾಚಾರ್ಯ ಡಾ. ಅಶೋಕ ಪಾಟೀಲ ಮಾಧ್ಯಮ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಬಿ.ಎಲ್ಡಿಇ ಶಿಕ್ಷಣ ಮಹಾವಿದ್ಯಾಲಯಕ್ಕೆ (ಬಿ.ಇಡಿ) ಮೂರು ರ್‍ಯಾಂಕ್



■ ಉದಯರಶ್ಮಿ ದಿನಪತ್ರಿಕೆ

ಜಮಖಂಡಿ: ಪ್ರತಿಷ್ಠಿತ ಬಿ.ಎಲ್.ಡಿ.ಇ ಸಂಸ್ಥೆಯ ಶಿಕ್ಷಣ ಮಹಾವಿದ್ಯಾಲಯ (ಬಿ.ಇಡಿ) ಕಾಲೇಜಿನ 2024–25ನೇ ಸಾಲಿನಲ್ಲಿ ಬಾಗಲಕೋಟೆ ವಿಶ್ವವಿದ್ಯಾಲಯಕ್ಕೆ ಪ್ರಶಿಕ್ಷಣಾರ್ಥಿಗಳು ಮೂರು ರ್‍ಯಾಂಕ್ ಪಡೆದಿದ್ದಾರೆ. ವಿಶ್ವವಿದ್ಯಾಲಯ ಕೊಡಲ್ಪಡುವ ಮೂರೂ ರ್‍ಯಾಂಕ್‌ಗಳನ್ನು ಮಹಾವಿದ್ಯಾಲಯದ ಪ್ರಶಿಕ್ಷಣಾರ್ಥಿಗಳು ಪಡೆದಿರುವುದು ಹೆಮ್ಮೆಯ ವಿಷಯವಾಗಿದೆ. ಬಾಗಲಕೋಟೆ ವಿಶ್ವವಿದ್ಯಾಲಯಕ್ಕೆ ಸುಷ್ಮಾ ತಂಬಾಕು ಸುವರ್ಣ ಪದಕದೊಂದಿಗೆ ಪ್ರಥ–'ಮ ರ್‍ಯಾಂಕ್, ಅಮುಲ ಗುಲಗಾಂವಿ ದ್ವಿತೀಯ ರ್‍ಯಾಂಕ್, ರಮೇಶ ಅಂಬಿ ತೃತೀಯ ರ್‍ಯಾಂಕ್ ಪಡೆದು ಮಹಾವಿದ್ಯಾಲಯದ ಕೀರ್ತಿ ಹೆಚ್ಚಿಸಿದ್ದಾರೆ. ರ್‍ಯಾಂಕ್ ಬಂದ ಪ್ರಶಿಕ್ಷಣಾರ್ಥಿಗಳಿಗೆ ಬಿ.ಎಲ್.ಡಿ.ಇ ಅಂಗ ಸಂಸ್ಥೆಗಳ ಆಡಳಿತಾಧಿಕಾರಿ ಪ್ರೊ.ಶ್ರೀಕಾಂತ ಲಗಳಿ, ಕಾಲೇಜಿನ ಅಭಿವೃದ್ಧಿ ಸಮಿತಿಯ ಅಧ್ಯಕ್ಷರಾದ ಶ್ರೀ ಅರುಣಕುಮಾರ ಶಹಾ, ಪ್ರಾಂಶುಪಾಲರಾದ ಪ್ರೊ.ಕೆ ಜೆ. ಜೀರಗಾಳಿ, ಉಪನ್ಯಾಸಕ ವೃಂದ, ಪ್ರಶಿಕ್ಷಣಾರ್ಥಿಗಳು ಹಾಗೂ ಸಿಬ್ಬಂದಿ ವರ್ಗದವರು ಅಭಿನಂದನೆ ಸಲ್ಲಿಸಿದ್ದಾರೆ.

# ಚಿನ್ನರ ಉತ್ಸವ: ಆದರ್ಶ ವಿದ್ಯಾರ್ಥಿಗಳಿಗೆ ಪ್ರಶಸ್ತಿ ಪ್ರಧಾನ



■ ಉದಯರಶ್ಮಿ ದಿನಪತ್ರಿಕೆ

ಜಮಖಂಡಿ: ಶ್ರೀ ಶಾಂತಿನಾಥ ಕನ್ನಡ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಚಿನ್ನರ ಉತ್ಸವ ಕಾರ್ಯಕ್ರಮವು ಅತ್ಯಂತ ವಿಜ್ರಮಣೆಯಿಂದ ನೆರವೇರಿತು.

ಈ ಸಂದರ್ಭದಲ್ಲಿ 2025–26ನೇ ಸಾಲಿನ ಆದರ್ಶ ವಿದ್ಯಾರ್ಥಿನಿಯಾಗಿ ಸೃಷ್ಟಿ ನರಸಗೊಂಡ ಹಾಗೂ ಆದರ್ಶ ವಿದ್ಯಾರ್ಥಿಯಾಗಿ ನಿಖಿಲಕುಮಾರ ಶಿಂಧೆ ಆಯ್ಕೆಯಾಗಿದ್ದು, ಚೀಟಿ ಹಾರಿಸುವ ಮೂಲಕ ಪ್ರಶಸ್ತಿ ಪ್ರಧಾನ ಮಾಡಲಾಯಿತು.

ಶಾಲೆಯ ಕಾರ್ಯಾಧ್ಯಕ್ಷರು, ಉಪಾಧ್ಯಕ್ಷರು, ನಿರ್ದೇಶಕರು, ಮುಖ್ಯೋಪಾಧ್ಯಾಯರು, ಕಾರ್ಯನಿರ್ವಾಹಕರು ಹಾಗೂ ಶಿಕ್ಷಕರ ಬಳಗವು ಇಬ್ಬರು ವಿದ್ಯಾರ್ಥಿಗಳಿಗೆ ಪ್ರಶಸ್ತಿ ನೀಡಿ ಅಭಿನಂದಿಸಿದರು.

ಇದೇ ವೇಳೆ ಶಾಲೆಯ ವಿದ್ಯಾರ್ಥಿಗಳ ಕ್ರೀಡಾ ಸಾಧನೆಯೂ ಗಮನ ಸೆಳೆಯಿತು. 5ನೇ ತರಗತಿ ವಿದ್ಯಾರ್ಥಿ ಸೈಯದ್ ಉಜೇರ್ ಜುನೇದಕರ ಕ್ರಿಕೆಟ್‌ನಲ್ಲಿ ದ್ವಿತೀಯ ಸ್ಥಾನ ಪಡೆದುಕೊಂಡಿದ್ದು, 4ನೇ ತರಗತಿ ವಿದ್ಯಾರ್ಥಿ ಸಮದ್ ಜುನೇದಕರ 200 ಮೀಟರ್ ಓಟದಲ್ಲಿ ಪ್ರಥಮ ಸ್ಥಾನಗಳಿಸಿದ್ದಾರೆ. ಈ ಇಬ್ಬರು ವಿದ್ಯಾರ್ಥಿಗಳು ಅಂತರಾಷ್ಟ್ರೀಯ ಮಟ್ಟಕ್ಕೆ ಆಯ್ಕೆಯಾಗಿರುವುದು ಶಾಲೆಗೆ ಹೆಮ್ಮೆಯ ವಿಷಯವಾಗಿದೆ ಎಂದು ಶಾಲೆಯ ಮುಖ್ಯ ಗುರುಮಾತೆ ಜ್ಯೋತಿ ಚೌಗಲೆ ಅವರು ಮಾಹಿತಿ ನೀಡುತ್ತಾ, "ವಿದ್ಯಾರ್ಥಿಗಳ ಸಾಧನೆ ನಮ್ಮ ಶಾಲೆಯ ಗೌರವವನ್ನು ಹೆಚ್ಚಿಸಿದೆ. ಅವರ ಪರಿಶ್ರಮಕ್ಕೆ ಅಭಿನಂದನೆಗಳು," ಎಂದು ಹೇಳಿದರು.

# ಇಂದು ಕನ್ನೂರ ಸವಾಯಿ ವಸ್ತಿಯಲ್ಲಿ ಶಾಹನೂರವಲಿ ದರ್ಗಾ ಜಾತ್ರೆ




■ ಉದಯರಶ್ಮಿ ದಿನಪತ್ರಿಕೆ

ವಿಜಯಪುರ:ತಾಲ್ಲೂಕಿನಕನ್ನೂರಸವಾಯಿವಸ್ತಿ ತೋಟದಲ್ಲಿರುವ ಅಸಂಖ್ಯಾತ ಭಕ್ತರ ಆರಾಧ್ಯದೈವ ಹಜರತಪೀರ ದರ್ಗಾದ ಶಾಹನೂರವಲಿ ಬಾಬಾ ದೇವರ ಜಾತ್ರಾ ಮಹೋತ್ಸವ ಇದೇ ಎಪ್ರಿಲ್ 9 ರಂದು ಗುರುವಾರ ವೈಭವದಿಂದ ಜರುಗಲಿದೆ.

ಪ್ರತಿ ವರ್ಷದಂತೆ ಈ ವರ್ಷವೂ ವಿಜೃಂಭಣೆಯಿಂದ ನಡೆಯಲಿರುವ ಶಾಹನೂರವಲಿ ಬಾಬಾ ದೇವರ ಜಾತ್ರಾ ಉತ್ಸವ ದೇವರ ಪೂಜಾ–ರಿಯಾಗಿರುವ ಶ್ರೀಮತಿ ಶಾರದಾಬಾಯಿ ಮೋಹನ ರಾಠೋಡ ಹಾಗೂ ಸಕಲ ಸದ್ಭಕ್ತರ ಸಹಾಯ, ಸಹಕಾರದಿಂದ ಆಯೋಜಿಸಲಾಗಿದೆ.

ಈ ಭಾಗದ ಎಲ್ಲ ಸಮಾಜದವರು ಶ್ರದ್ಧಾಭಕ್ತಿಯಿಂದ ಶಾಹನೂರವಲಿ ಬಾಬಾ ದೇವರನ್ನು ಪೂಜ್ಯ ಭಾವನೆಯಿಂದ ಆರಾಧಿಸಿ ಗೌರವಿಸುತ್ತಾರೆ. ತಮ್ಮ ಸನ್ನಿಧಿಯಲ್ಲಿ ಬಂದ ಭಕ್ತ–ರಿಗೆ ಎದುರಾಗಿರುವ ಸಂಕಷ್ಟಗಳನ್ನು ನಿವಾರಿಸಿ ಜೀವನದಲ್ಲಿ ನೆಮ್ಮದಿ ಕರುಣಿಸುತ್ತಾರೆಂಬ ಅಚಲ ನಂಬಿಕೆ ಭಕ್ತ ವಲಯದಲ್ಲಿ ಇರುವುದರಿಂದ ಬಾಬಾ ಜಾಗೃತ ದೇವರಾಗಿ ಇಲ್ಲಿ ನೆಲೆಗೊಂಡಿದ್ದಾರೆ. ಬಾಬಾರ ಪವಾಡಗಳನ್ನು ಪೂಜಾರಿಣಿ ಶ್ರೀಮತಿ ಶಾರದಾಬಾಯಿ ಮೋಹನ ಚವ್ಹಾಣ ಭಕ್ತರಿಗೆ ಮನದಟ್ಟು ಮಾಡಿಕೊಟ್ಟು ಭಕ್ತಿಯ ರಸಭಾವವನ್ನು ಸೃಜೀಸುವ ಕಾಯಕದಲ್ಲಿ ನಿರತರಾಗಿದ್ದಾರೆ. ಇವರ ನೇತೃತ್ವದಲ್ಲಿ ಹಾಗೂ ಭಕ್ತರ ಸಹಕಾರದಲ್ಲಿ ಗುರುವಾರ ದಗಾ9ದ ಈ ಜಾತ್ರಾ ಮಹೋತ್ಸವ ವಿಜೃಂಭಣೆಯಿಂದ ಆಚರಿಸಲಾಗುತ್ತದೆ.

# ಚಕ್ಕೋಡನಹಳ್ಳಿ ಕಾಳಮ್ಮ ಜಾತ್ರಾ ಮಹೋತ್ಸವ

■ ಉದಯರಶ್ಮಿ ದಿನಪತ್ರಿಕೆ



ಹೆಚ್ ಡಿ ಕೋಟೆ: ತಾಲೂಕಿನ ಚಕ್ಕೋಡನಹಳ್ಳಿ ಗ್ರಾಮದಲ್ಲಿ ಶ್ರೀ ಕಾಳಮ್ಮ ಜಾತ್ರಾ ಮಹೋತ್ಸವ ವಿಜೃಂಭಣೆಯಿಂದ ನಡೆಯಿತು.

ಕಾಳಮ್ಮ ದೇವಸ್ಥಾನವನ್ನು ತಳಿರು ತೋರಣಗಳಿಂದ ಸಿಂಗರಿಸಲಾಗಿತ್ತು. ಬೀದಿಗಳನ್ನು ವಿದ್ಯುತ್ ದೀಪಗಳಿಂದ, ಹೂಗಳಿಂದ ದೇವಸ್ಥಾನವನ್ನು ಅಲಂಕರಿಸಲಾಗಿತ್ತು. ಮೂರು ದಿನಗಳ ಕಾಲ ನಡೆದ ದೇವಿಯ ಮಹೋತ್ಸವಕ್ಕೆ ಸುತ್ತಮುತ್ತಲಿನ ಗ್ರಾಮಗಳ ಭಕ್ತರು ಸಾಕ್ಷಿಯಾದರು.

ಇತಿಹಾಸ ಹಿನ್ನೆಲೆಯುಳ್ಳ ಕಾಳಮ್ಮ ದೇವಸ್ಥಾನಕ್ಕೆ ಶುಕ್ರವಾರ ಹಿರೇಹಳ್ಳಿ ಗ್ರಾಮಸ್ಥರು ಸೊಪ್ಪು ತಂದು ಚಪ್ಪರ ಹಾಕಿದರು.ಶನಿವಾರಸೋನಹಳ್ಳಿಕೆರೆಯಲ್ಲಿಕಾಳಮ್ಮವಿಗ್ರಹಕ್ಕೆ ವಿಶೇಷ ಪೂಜೆ ಸಲ್ಲಿಸಲಾಯಿತು. ಈ ವೇಳೆ ಸತ್ತಿಗೆ, ಡೊಳ್ಳು ಕುಣಿತ, ವಾದ್ಯಗೋಷ್ಠಿ ಸೇರಿದಂತೆ ಕಲಾತಂಡಗಳೊಂದಿಗೆ ಕೆರೆಯಿಂದ ಕಾಳಮ್ಮ ದೇವಸ್ಥಾನದವರೆಗೂ ತಾಯಿಯ ಮೆರವಣಿಗೆ ಮಾಡಿ ದೇವಸ್ಥಾನದಲ್ಲಿ ಪೂಜಿಸಲಾಯಿತು. ಭಾನುವಾರ ಮುಂಜಾನೆ ಮತ್ತೆ ಕೆರೆಯಲ್ಲಿ ಕಾಳಮ್ಮ ತಾಯಿ ವಿಗ್ರಹವನ್ನು ಶುದ್ಧಗೊಳಿಸಿ, ಹೂವಿನ ಅಲಂಕಾರ ಮಾಡಿ ಪೂಜಿಸಲಾಯಿತು. ಬಳಿಕ ಕೆರೆಯಿಂದ ದೇವಸ್ಥಾನದವರೆಗೂ ಪ್ರಮುಖ ಬೀದಿಗಳಲ್ಲಿ ಮೆರವಣಿಗೆ ಮಾಡಿ ಮಾಡಲಾಯಿತು. ಈ ವೇಳೆ ಸಾವಿರಾರು ಮಹಿಳಾ ಭಕ್ತಾದಿಗಳು ತಂಬಿಟ್ಟು ಹೊತ್ತು ಮೆರವಣಿಗೆಯಲ್ಲಿ ಸಾಗಿದರು.

## ದೇವಸ್ಥಾನದ ವಿಶೇಷತೆ

ನೂರು ವರ್ಷಗಳ ಇತಿಹಾಸ ಹೊಂದಿರುವ ಕಾಳಮ್ಮ ತಾಯಿ, ಚಕ್ಕೋಡನಹಳ್ಳಿ ಸೇರಿದಂತೆ 12 ಗ್ರಾಮಗಳ ಶಕ್ತಿ ದೇವತೆಯಾಗಿ ಹೊರಹೊಮ್ಮಿದ್ದಾಳೆ. ಸಂಕಷ್ಟ ನಿವಾರಿಸಿ, ಊರಿಗೆ ಉಳೀತು ಮಾಡುವ ಕಾಳಮ್ಮ ತಾಯಿ ಮೇಲೆ ಸುತ್ತಮುತ್ತಲಿನ ಗ್ರಾಮದ ಜನರಿಗೆ ಅಪಾರ ನಂಬಿಕೆ. ಹೀಗಾಗಿ ಹರಿಕೆ ಹೊತ್ತು ಜಾತ್ರೆ ದಿನ ಅದನ್ನು ತೀರಿಸುತ್ತಾರೆ. 12 ಗ್ರಾಮಗಳು ನಡೆಸುವ ಈ ಜಾತ್ರೆಯ ಸಂಪೂರ್ಣ ಜವಾಬ್ದಾರಿಯನ್ನು

ಗಡಿ ಯಜಮಾನರಾದ ಹಿರೇಹಳ್ಳಿ ಪ್ರಕಾಶ್ ವಹಿಸಿಕೊಂಡು, ಪ್ರತಿವರ್ಷ ಯಶಸ್ವಿಯಾಗಿ ನಡೆಸಿಕೊಂಡು ಬರುತ್ತಿದ್ದಾರೆ.

ಈ ದೃಶ್ಯವನ್ನು ನೋಡುವುದಕ್ಕೆ ಎರಡು ಕಣ್ಣು ಸಾಲದಾಗಿತ್ತು. ದೇವಸ್ಥಾನಕ್ಕೆ ಬಂದು ತಲುಪಿದ ನಂತರ ದೇವಸ್ಥಾನದ ಸುತ್ತ ಮೆರವಣಿಗೆ ಮಾಡಿ ದೇವಸ್ಥಾನದಲ್ಲಿ ದೇವಿಯ ವಿಗ್ರಹ ಇರಿಸಲಾಯಿತು. ಬಳಿಕ ಮಹಿಳೆಯರು, ತಂಬಿಟ್ಟು ಪೂಜೆ ಮಾಡಿಸಿ ತಾಯಿಯ ಕೃಪೆಗೆ ಪಾತ್ರರಾದರು.

# ಡಾ. ಬಿ.ಆರ್.ಅಂಬೇಡ್ಕರ್ ಜಯಂತಿಯಲ್ಲಿ ಪಾಲ್ಗೊಳ್ಳಲು ಮನವಿ

■ ಉದಯರಶ್ಮಿ ದಿನಪತ್ರಿಕೆ



ವಿಜಯಪುರ: ಜಿಲ್ಲಾಡಳಿತ, ಜಿಲ್ಲಾ ಪಂಚಾಯತ ಹಾಗೂ ಸಮಾಜ ಕಲ್ಯಾಣ ಇಲಾಖೆಯ ವತಿಯಿಂದ ಇದೇ ಏ. 14 ರಂದು ನಡೆಯಲಿರುವ ಸಂವಿಧಾನ ಶಿಲ್ಪಿ, ಭಾರತ ರತ್ನ ಡಾ.ಬಿ.ಆರ್. ಅಂಬೇಡ್ಕರ್ ಅವರ 135ನೇ ಜನ್ಮ ದಿನಾಚರಣೆಯಲ್ಲಿ ಜಿಲ್ಲಾ ಮಟ್ಟದ ಅಧಿಕಾರಿಗಳು ತಮ್ಮ ಸಿಬ್ಬಂದಿಗಳೊಂದಿಗೆ ಭಾಗವಹಿಸಲು ಹಾಗೂ ಜಿಲ್ಲೆಯ ಸಾರ್ವಜನಿಕರು, ವಿವಿಧ ಸಂಘಟನೆಗಳ ಪದಾಧಿಕಾರಿಗಳು ಮತ್ತು ಎಲ್ಲಾ ಸಮುದಾಯದ ಗಣ್ಯರು ಭಾಗವಹಿಸುವಂತೆ ಎಂದು ಜಿಲ್ಲಾ ಸಮಾಜ ಕಲ್ಯಾಣ ಇಲಾಖೆಯ ಉಪ ನಿರ್ದೇಶಕರು ತಿಳಿಸಿದ್ದಾರೆ.

ಅಂದು ಬೆಳಗ್ಗೆ 8 ಗಂಟೆಗೆ ನಗರದ ಅಂಬೇಡ್ಕರ್ ವೃತ್ತದಲ್ಲಿರುವ ಡಾ. ಬಿ ಆರ್. ಅಂಬೇಡ್ಕರ್ ಅವರ ಪುತ್ಥಳಿಗೆ ಮಾಲಾರ್ಪಣೆ ಮಾಡಲಾಗುವುದು.

ನಂತರ ಡಾ.ಬಿ.ಆರ್.ಅಂಬೇಡ್ಕರ ಅವರ ಭಾವಚಿತ್ರದ ಮೆರವಣಿಗೆಯನ್ನು ವಿವಿಧ ಕಲಾ ತಂಡಗಳೊಂದಿಗೆ ಬುದ್ಧವಿಹಾರ ಜಲನಗರದಿಂದ ಪ್ರಾರಂಭಿಸಿ, ಜಿಲ್ಲಾ ನ್ಯಾಯಾಲಯದ ಮಾರ್ಗವಾಗಿ, ಬಾಗಲಕೋಟೆ ಕ್ರಾಸ್, ಕಿತ್ತೂರು ರಾಣಿ ಚನ್ನಮ್ಮ ಕೇಂದ್ರ ಬಸ್ ನಿಲ್ದಾಣ, ಕೆ.ಸಿ.ಮಾರ್ಕೆಟ್, ಮಹಾತ್ಮ ಗಾಂಧಿ ವೃತ್ತ, ಬಸವೇಶ್ವರ ವೃತ್ತ ಹಾಗೂ ಡಾ.ಬಿ.ಆರ್. ಅಂಬೇಡ್ಕರ್ ವೃತ್ತದ ಮೂಲಕ ಕಂದಗಲ್ ಶ್ರೀ ಹನುಮಂತರಾಯರ ರಂಗಮಂದಿರದವರೆಗೆ ನಡೆಯಲಿದೆ.

ಬೆಳಿಗ್ಗೆ 10 ಗಂಟೆಗೆ ಕಂದಗಲ್ ಶ್ರೀ ಹನುಮಂತರಾಯ ರಂಗಮಂದಿರದಲ್ಲಿ ವೇದಿಕೆ ಕಾರ್ಯಕ್ರಮ ಜರುಗುವುದು. ಜಯಂತಿ ಕಾರ್ಯಕ್ರಮಕ್ಕೆ ಜಿಲ್ಲಾ ಮಟ್ಟದ ಅಧಿಕಾ–ರಿಗಳು ತಮ್ಮ ಸಿಬ್ಬಂದಿಗಳೊಂದಿಗೆ ಹಾಗೂ ಜಿಲ್ಲೆಯ ಸಾರ್ವಜನಿಕರು, ವಿವಿಧ ಸಂಘಟನೆಗಳ ಪದಾಧಿಕಾರಿಗಳು ಮತ್ತು ಎಲ್ಲಾ ಸಮುದಾಯದ ಗಣ್ಯರು ಭಾಗವಹಿಸಬೇಕು ಎಂದು ಪ್ರಕಟಣೆಯಲ್ಲಿ ಅವರು ತಿಳಿಸಿದ್ದಾರೆ.

# ಖಾಜಾ ಬಂದೇ ನವಾಜ್ ದರ್ಗಾದಲ್ಲಿ ಝುಲಾ ಮುಬಾರಕ್ ಸಂಭ್ರಮ

ಕಲಬುರ್ಗಿ: ಸೋಮವಾರ ಝುಲಾ ಪ್ರಯುಕ್ತ ನಮಾಝ್–ಎ–ಅಸರ್ ಮಹೆಬೂಬ್ ಗುಲ್ಶನ್ ಸಮರ್ ಹೌಸ್‌ನಲ್ಲಿ ನೆರವೇರಿಸಲಾಯಿತು. ಬಳಿಕ ಮಫಿಲ್–ಎ–ಸಮಾ ಕಾರ್ಯಕ್ರಮ ಜರುಗಿದ್ದು, ವಿವಿಧ ನಗರಗಳಿಂದ ಆಗಮಿಸಿದ ಖ್ಯಾತ ಕವ್ವಾಲಿಗಳು ತಮ್ಮ ಮನಮೋಹಕ ಕಲಾಮ್ಗಳ ಮೂಲಕ ಭಕ್ತರನ್ನು ಮಂತ್ರಮುಗ್ಧರನ್ನಾಗಿಸಿದರು.ಕಾರ್ಯಕ್ರಮದ ಅಂತ್ಯದಲ್ಲಿ ಫಾತೇಹಾ ಖ್ವಾನಿ ನೆರವೇರಿಸಲಾಯಿತು.

ಇದಾದ ನಂತರ ಜುಲೂಸ್–ಎ–ಜ್ಹೇಳಾ ಮುಬಾರಕ್‌ನ್ನು ವೈಭವವಾಗಿ ಆರಂಭಿಸಲಾಯಿತು. ಜುಲೂಸ್ ಜಗತ್ ಸರ್ಕಲ್ ಮೂಲಕ ಸಾಗುತ್ತಾ ಸೂಪರ್ ಮಾರ್ಕೆಟ್ ಪ್ರದೇಶಕ್ಕೆ ತಲುಪಿದ್ದು, ಅಲ್ಲಿ ಮಾರ್ಕೆಟ್ ಮಸೀದಿಯಲ್ಲಿ ನಮಾಝ್–ಎ–ಮಘಿ–ಬ್ ಸಲ್ಲಿಸಲಾಯಿತು. ಬಳಿಕ ಜುಲೂಸ್ ಸರಾಫ್ ಬಜಾರ್, ಬಹಮನಿ ಚೌಕ್ ಹಾಗೂ ಹಫ್ತ್ ಗುಂಬಜ್ ಮಾರ್ಗವಾಗಿ ರಾತ್ರಿ ತಡವರೆಗೆ ಮುಂದುವರಿಯಿತು.

ರಾತ್ರಿ ಸುಮಾರು 10:30ರ ವೇಳೆಗೆ ಜ್ಹೇಳಾ ಮುಬಾರಕ್ ಗಯಾರಾ ಸೀಡಿಗೆ ತಲುಪಿತು. ಈ ಸಂದರ್ಭದಲ್ಲಿ ಹಜ್ರತ್ ಡಾ. ಹಾಫಿಜ್ ಸಯ್ಯದ್ ಮುಹಮ್ಮದ್ ಅಲಿ ಅಲ್ ಹುಸೈನಿ ಸಾಹೇಬ್ (ಸಜ್ಜಾದಾ ನಶೀನ್) ಅವರು ಜ್ಹೇಳಾ ಮುಬಾರಕ್ನ ಪ್ರತಿಕಾತ್ಮಕ ಕಷ್ಟಿಯನ್ನು ತಮ್ಮ ತಲೆಯ ಮೇಲೆ ಹೊತ್ತು ಬರಾದರಿ ಒಳಗೆ ಕೊಂಡೊಯ್ದರು. ಅಲ್ಲಿ ಸಂಪ್ರದಾಯಬದ್ಧ ವಿಧಿವಿಧಾನಗಳನ್ನು ನೆರವೇರಿಸಿದರು.



# ರಾಜ್ಯ ಪತ್ರಕರ್ತರ ಸಮ್ಮೇಳನಕ್ಕೆ ಮುಖ್ಯಮಂತ್ರಿಗಳಿಗೆ ಆಹ್ವಾನ

■ ಉದಯರಶ್ಮಿ ದಿನಪತ್ರಿಕೆ


ಬೆಂಗಳೂರು: ಬಸವನನಾಡು, ಸೂಫಿಸಂತರ ನೆಲೆಬೀಡು ಬೀದರನಲ್ಲಿ ಇದೇ 11 ಮತ್ತು 12 ರಂದು ಕೆಯುಡಬ್ಲ್ಯೂಜೆ ಆಯೋಜಿಸಿರುವ 40ನೇ ರಾಜ್ಯ ಪತ್ರಕರ್ತರ ಸಮ್ಮೇಳನ ಉದ್ಘಾಟನೆಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರನ್ನು ಜಿಲ್ಲಾ ಉಸ್ತುವಾರಿ ಸಚಿವರಾದ ಈಶ್ವರ್ ಬಿ ಖಂಡ್ರೆ ಮತ್ತು ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ (ಕೆಯುಡಬ್ಲ್ಯೂಜೆ ) ರಾಜ್ಯಾಧ್ಯಕ್ಷರಾದ ಶಿವಾನಂದ ತಗಡೂರ ಅವರು ಸಿಎಂ ನಿವಾಸದಲ್ಲಿ ಭೇಟಿ ಮಾಡಿ ಆಹ್ವಾನ ನೀಡಿದರು.

## ಪ್ರತ್ಯೇಕ ಅಪಘಾತ: ಇಬ್ಬರು ಸವಾರರು ಸಾವು

ಕಲಬುರ್ಗಿ: ನಗರ ಹಾಗೂ ಹೊರವಲಯದಲ್ಲಿ ಎರಡು ಪ್ರತ್ಯೇಕ ರಸ್ತೆ ಅಪಘಾತಗಳಲ್ಲಿ ಇಬ್ಬರು ಮೃತಪಟ್ಟಿದ್ದಾರೆ. ಮೃತರನ್ನು ಓಝಾ ಲೇಔಟ್‌ನ ಸಂತೋಷ ಸೂರ್ಯಕಾಂತ್ ಬೌಳಿಗಾರ್ (44) ಹಾಗೂ ಮಾಲಗತ್ತಿ ಮೂಲದ ಪುಣೆಯಲ್ಲಿ ಕೆಲಸ ಮಾಡುತ್ತಿದ್ದ ಕಾಶಿನಾಥ ತಳವಾರ್ ಎಂದು ಗುರುತಿಸಲಾಗಿದೆ. ನಗರದ ಶಹಾಬಾದ್ ವರ್ತುಲ ರಸ್ತೆಯ ಸರ್ಕಲ್ ಹತ್ತಿರ ಮಂಗಳವಾರ ಬೆಳಿಗ್ಗೆ ಲಾರಿ ಡಿಕ್ಕಿ ಹೊಡೆದ ಪರಿಣಾಮ ದ್ವಿಚಕ್ರವಾಹನ ಸವಾರ ಓಝಾ ಲೇಔಟ್ ನಿವಾಸಿ ಸಂತೋಷ್ ಸ್ಥಳದಲ್ಲಿಯೇ ಮೃತಪಟ್ಟಿದ್ದಾನೆ.

# ಜನಗಣತಿ ಮೇಲ್ವಿಚಾರಕರರಿಗೆ & ಗಣತಿದಾರರಿಗೆ ತರಬೇತಿ

■ ಉದಯರಶ್ಮಿ ದಿನಪತ್ರಿಕೆ



ಆಲಮೇಲ: ಪಟ್ಟಣದ ಎ.ಕೆ.ನಂದಿ ಕಾಲೇಜಿನಲ್ಲಿ ಆಲಮೇಲತಾಲ್ಲೂಕಿನ2027ರಮೊದಲಹಂತದಜನಗಣತಿ ಕಾರ್ಯದ ಮೇಲ್ವಿಚಾರಕರರಿಗೆ ಹಾಗೂ ಗಣತಿದಾರರಿಗೆ 3 ದಿನದ ತರಬೇತಿಯನ್ನು ಪ್ರಾರಂಭಿಸಲಾಯಿತು.


ಈ ವೇಳೆ ತರಬೇತಿ ಕೇಂದ್ರವನ್ನು ಭೇಟಿ ನೀಡಿ ಮಾತನಾಡಿದ ತಹಶಿಲ್ದಾರರರು ಎಮ್.ಅರಕೇರಿ ರವರು ದೇಶದ ಮಹತ್ವಾಕಾಂಕ್ಷೆ ಜನಗಣತಿ 2027 ರ ಮೊದಲ ಹಂತದ ಸಮೀಕ್ಷೆ ಎಪ್ರಿಲ್ 16 ರಿಂದ ಜನಗಣತಿ ಮನೆಗಳ ಭೌತಿಕ ಸ್ಥಿತಿಗತಿಗಳನ್ನು 33 ಸರಳ ಪ್ರಶ್ನೆಗಳೊಂದಿಗೆ ಇದೆ ಮೊದಲ ಬಾರಿಗೆ ಡಿಜಿಟಲ್ ರೂಪದಲ್ಲಿ ಸಂಗ್ರಹಿಸಲು ಮನೆ ಮನೆಗೆ ತೆರಳಿ ಗಣತಿ ಕಾರ್ಯ ಪ್ರಾರಂಭಗೊಳ್ಳಲಿದೆ. ಈ ಮಹತ್ವದ ಕಾರ್ಯದಲ್ಲಿ ಎಲ್ಲರೂ ಉತ್ಸಾಹದಿಂದ ಪಾಲ್ಗೊಂಡು ಬರುವ ಹತ್ತು ವರ್ಷಗಳಿಗೆ ಸರಕಾರದ ನೀತಿ ಆಯೋಗಗಳಿಗೆ, ವಿವಿಧ ಯೋಜನೆಗಳಿಗೆ ಮತ್ತು ದೇಶದ ಪ್ರಜೆಗಳಿಗೆ ವಿವಿಧ ಸೌಲಭ್ಯಗಳನ್ನು ಒದಗಿಸಲು ಸರಿಯಾದ ಅಂಕಿ ಅಂಶಗಳನ್ನು ನೀಡಬೇಕು ಎಂದು ತಿಳಿಸಿದರು.

ಜನಗಣತಿ ಸಮೀಕ್ಷೆಗೆ ನಿಯುಕ್ತಿ ಆದ ಸಿಬ್ಬಂದಿ ಯಾರಾದರೂ ತರಬೇತಿಗೆ ಗೈರು ಉಳಿದರೆ ಅಂತಹವರ ವಿರುದ್ಧ ಕ್ರಮ ಕೈಗೊಂಡು ಶಿಸ್ತುಕ್ರಮ ಜರುಗಿಸಲಾಗುವುದು ಎಂದರು

ಈ ವೇಳೆ ಉಪ ತಹಶಿಲ್ದಾರ ಪುಲಕೇಶಿ ಮೂಕಿಹಾಳ, ತಹಶಿಲ್ದಾರ ಕಚೇರಿಯ ನಂದೀಶ ದಶವಂತ, ವಿನೋದ ಭಿಸ್ಸೆ, ಆಲಮೇಲ ತಾಲ್ಲೂಕಿನ ಸರಕಾರಿ ನೌಕರರ ಸಂಘದ ಅಧ್ಯಕ್ಷ ರವಿ ಬಿರಾದಾರ, ಕ್ಷೇತ್ರ ತರಬೇತುದಾರ ಲಕ್ಷ್ಮೀಪುತ್ರ ಕಿರನಳ್ಳಿ ಸೋಮನಾಥ ಗಣಿ, ನಾಗರಾಜ ನಿಂಬರಗಿ, ಆರೀಫ ಮೇಲಿನಮನಿ, ಶಿಕ್ಷಣ ಸಂಯೋಜಕ ಎಮ್.ಪಿ.ಭಿಸ್ಸೆ ಮುಂತಾದವರು ಇದ್ದರು.

# ಇಂಡಿ ಬಸ್ ಘಟಕಕ್ಕೆ ಅಧ್ಯಕ್ಷ ಅರುಣಕುಮಾರ ಭೇಟಿ

■ ಉದಯರಶ್ಮಿ ದಿನಪತ್ರಿಕೆ



ಇಂಡಿ: ಜನರ ಊರಿಗೆ ಉತ್ತಮ ಸಾರಿಗೆ ಎಂಬ ಧ್ಯೇಯ ವಾಕ್ಯದೊಂದಿಗೆ ಇಂಡಿ ಬಸ್ ಘಟಕಕ್ಕೆ ಸಾರಿಗೆ ನಿಗಮದ ಅಧ್ಯಕ್ಷ ಅರುಣ–ಕುಮಾರ ವೈ ಪಾಟೀಲ ಭೇಟಿ ನೀಡಿ ಸಾರಿಗೆ ಘಟಕದಲ್ಲಿಯ ಸೌಲಭ್ಯಗಳು ಹಾಗೂ ಕಾರ್ಯಾಚರಣೆ ಸ್ಥಿತಿಗತಿಗಳನ್ನು ಸಮಗ್ರವಾಗಿ ಪರಿಶೀಲಿಸಿದರು.

ಈ ಭೇಟಿ ವೇಳೆ ಸಾರ್ವಜನಿಕ ಸೇವೆಗೆ ಸಂಬಂಧಿತ ಕೆಲವು ಗಂಭೀರ ಸಮಸ್ಯೆಗಳು ಬೆಳಕಿಗೆ ಬಂದಿದ್ದು ಜನರ ಅನುಕೂಲತೆ ಮತ್ತು ಪ್ರಯಾಣದ ಭದ್ರತೆಯನ್ನು ಮೊದಲ ಆಧ್ಯತೆಯಾಗಿ ಪರಿಗಣಿಸಿ ಸಂಬಂಧಪಟ್ಟ ಅಧಿಕಾ–ರಿಗಳಿಗೆ ತಕ್ಷಣ ಸ್ಪಷ್ಟ ಮತ್ತು ಕಟ್ಟುನಿಟ್ಟಿನ ನಿರ್ದೇಶನಗಳನ್ನು ನೀಡಿದರು.

ಸಾರ್ವಜನಿಕರಿಗೆ ಗುಣಮಟ್ಟದ ವಿಶ್ವಾಸಾರ್ಹ ಹಾಗೂ ಸಮಯೋಚಿತ ಸಾರಿಗೆ ಸೇವೆ ಒದಗಿಸುವದು ನಮ್ಮ ಪ್ರಮುಖ ಬದ್ದತೆಯಾಗಿದೆ. ಸಮಸ್ಯೆ ತ್ವರಿತ ನಿವಾರಣೆ ಮಾಡಿ ಸೇವೆ ವೇಗಗೊಳಿಸಬೇಕು ಎಂದು ಅಧಿಕಾ–ರಿಗಳಿಗೆ ಸೂಚಿಸಿದರು.

ಘಟಕ ವ್ಯವಸ್ಥಾಪಕ ರೇವಣಸಿದ್ದ ಖೈನೂರ, ಸಿಬ್ಬಂದಿ ವರ್ಗದವರು ಉಪಸ್ಥಿತರಿದ್ದು ಸೇವಾ ಸುಧಾರಣೆಗೆ ಕೈ ಜೊಡಿಸುವ ಸಂಕಲ್ಪ ವ್ಯಕ್ತಪಡಿಸಿದರು.

**Printed by:** AVINASH BIDARI, **Published and owned by:** SHAILA INDUSHEKHAR MANUR **Printed at:** ARUN OFFSET PRINTERS,No.23, Sanjaygandhi Nagar, Indi Road, Vijayapura - 586101, Vijayapura Dist., Karnataka. **Published at:** At No.14, Silk City, Near Varasiddi Vinayaka Temple, Atalatti Link Road, Vijayapura -586102, Vijayapura Dist., Karnataka..**Editor :** INDUSHEKHAR MANUR